ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 190 | ಆರ್ಎನ್ಐ ನಂ: ಕೆಎಆರ್ಕೆಎಎನ್/2023/88462 | ಕೆಎ/ಎಸ್ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 17–02–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 190 | RNI No: KARKAN/2023/88462 | KA/SK/CTA-874/2024-2026 | Chitradurga | Date: 17-02-2025 Monda | Page: 4 | Price: Rs. 2-00


ಒಳಪುಟದ ಸುದ್ದಿಗಳು
ಮೈಕ್ರೋಫೈನಾನ್ಸ್ ಸಂಸ್ಥೆ ನಿಯಂತ್ರಣ ಕುರಿತ ಸುಗ್ರೀವಾಜ್ಞೆ ಅನುಷ್ಠಾನ: ಮುಖ್ಯಮಂತ್ರಿ 2
ನಗರ ಕೇಂದ್ರ ಗ್ರಂಥಾಲಯ, ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಸಿಇಒ ಭೇಟಿ 3
ಚಿತ್ರದುರ್ಗ ಲೋಕಸಭಾ ಕ್ಷೇತ್ರದ ರೈಲ್ವೆ ಸೇತುವೆ ನಿರ್ಮಾಣಕ್ಕೆ ರೂ.164.00 ಕೋಟಿ ಬಿಡುಗಡೆ 4

ಸುದ್ದಿ, ಜಾಹಿರಾತಿಗೆ 9686622252

### 32ನೇ ಫಲ–ಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿದ ಸಂಸದ ಗೋವಿಂದ ಎಂ.ಕಾರಜೋಳ

## ಕೋಟೆನಾಡಲ್ಲಿ ನೋಡುಗರ ಕಣ್ಮನ ಸೆಳೆದ

# ಫಲಪುಷ್ಪ ಪ್ರದರ್ಶನ
























» **ನಮ್ಮಜನ.ಕಾಂ,**

ಚಿತ್ರದುರ್ಗ: ಜಿಲ್ಲೆಯ ರೈತರು ಬೆಳೆದ ಬೆಳೆ ಸಂಗ್ರಹಿಸಿಡಲು ರೂ.10 ಕೋಟಿ ವೆಚ್ಚದ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಅಧಿಕಾರಿಗಳು ಪ್ರಸ್ತಾವ ಸಲ್ಲಿಸುವಂತೆ ಸಂಸದ ಗೋವಿಂದ ಎಂ.ಕಾರಜೋಳ ತಿಳಿಸಿದರು.

ನಗರದ ವಿ.ಪಿ.ಬಡಾವಣೆಯಲ್ಲಿರುವ ತೋಟಗಾರಿಕೆ ಇಲಾಖೆ ಕಚೇರಿ ಆವರಣದಲ್ಲಿ ಶನಿವಾರ ಆಯೋಜಿಸಿದ್ದ 32ನೇ ಫಲ–ಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಬಾರ್ಡ್ ಅಥವಾ ಸಿಎ□□ಆರ್ ಅನುದಾನದಲ್ಲಿ ರೂ.10 ಕೋಟಿ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ಪ್ರಸ್ತಾವನೆಗಳನ್ನು ಸಿದ್ದಪಡಿಸಿ, ಸಲ್ಲಿಸುವ ಕೆಲಸವಾಗಬೇಕು ಎಂದು ಹೇಳಿದರು.

ಫಲ–ಪುಷ್ಪ ಪ್ರದರ್ಶನ ರೈತ ಸ್ನೇಹಿ ಕಾರ್ಯಕ್ರಮವಾಗಿದ್ದು, ತೋಟಗಾರಿಕೆ ಇಲಾಖೆಯ ವಿವಿಧ ವಿಷಯ ತಜ್ಞರನ್ನು ಆಹ್ವಾನಿಸಿ, ರೈತರಿಗೆ ತರಬೇತಿ ನೀಡಬೇಕು. ಸಾವಿರಾರು ಕೋಟಿ ಖರ್ಚು ಮಾಡಿ ವಿಶ್ವ ವಿದ್ಯಾಲಯಗಳನ್ನು ಸ್ಥಾಪಿಸಲಾಗಿದ್ದು, ಹೊಸ ಹೊಸ ತಳಿಗಳ ಸಂಶೋಧನೆ ಮಾಡಬೇಕಿರುವುದು ವಿಶ್ವವಿದ್ಯಾಲಯಗಳ ಸ್ಥಾಪನೆಯ ಉದ್ದೇಶ. ರೈತರಿಗೆ ಕಡಿಮೆ ವೆಚ್ಚದಲ್ಲಿ ವ್ಯವಸಾಯ ಮಾಡುವ ನಿಟ್ಟಿನಲ್ಲಿ ತಯಾರು ಮಾಡಬೇಕು ಎಂದರು.

ದೇಶದ ಪರಂಪರೆಯಂತೆ ಕೊಟ್ಟಿಗೆ ಗೊಬ್ಬರ ಸೇರಿ ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು. ಹಾಗಾಗಿ ರೈತರನ್ನು ಈ ವಿಚಾರದಲ್ಲಿ ಅಳವಾಗಿ ಅಧ್ಯಯನ ಮಾಡುವ ಅಗತ್ಯವಿದೆ. ರಾಸಾಯನಿಕಗಳನ್ನು ಬಳಸಿ ಹಣ್ಣುಗಳನ್ನು ಮಾರಾಟ ಮಾಡುವುದರಿಂದ ಜನರಿಗೆ ವಿಷ ನೀಡಿದಂತಾಗುತ್ತದೆ. ಹಾಗಾಗಿ ರೈತರಿಗೆ ಜಾಗೃತಿ ಮೂಡಿಸಬೇಕಾಗಿದ್ದು, ರೈತರು ತಾವು ಬೆಳೆದ ಬೆಳೆಯನ್ನು ಮಾರುಕಟ್ಟೆಗೆ ಬಿಡುವ ಮುನ್ನ ಸಂಪೂರ್ಣವಾಗಿ ಹಣ್ಣು ಆದ ನಂತರವೇ ಮಾರುಕಟ್ಟೆಗೆ ಬಿಡಬೇಕು ಎಂದು ತಿಳಿಸಿದ ಅವರು, ಭೂಮಿ ಮತ್ತು ನೀರಿನ ಮೇಲೆ ರೈತರ ಶ್ರೀಮಂತಿಕೆ ನಿಂತಿದೆ ಎಂದರು.

ಜಿಲ್ಲೆಯು ಒಣ ಬೇಸಾಯದಿಂದ ಕೂಡಿದ್ದು, ಒಣ ಬೇಸಾಯದಲ್ಲಿ ಉತ್ತಮ ಹಣ್ಣಿನ ಬೆಳೆ ಬೆಳೆಯಲು ಸಾಧ್ಯವಿದೆ. ಇದರ ಜೊತೆಗೆ ಹಣ್ಣಿನ ರುಚಿಯು ಅತ್ಯುತ್ತಮವಾಗಿರಲಿದೆ. ಬಿಜಾಪುರ ಜಿಲ್ಲೆಯಲ್ಲಿ ಬೆಳೆದ ದಾಳಿಂಬೆ, ದ್ರಾಕ್ಷಿ, ಬಾಳೆಹಣ್ಣು ಯಾವ ಜಿಲ್ಲೆಯಲ್ಲಿಯೂ ಬೆಳೆಯಲು ಸಾಧ್ಯವಿಲ್ಲ. ಅದಕ್ಕೆ ಕಾರಣ ಅಲ್ಲಿನ ಹವಾಮಾನ ಹಾಗೂ ಬಿಸಿಲು. ಚಿತ್ರದುರ್ಗ ಜಿಲ್ಲೆಯಲ್ಲಿಯೂ ತೋಟಗಾರಿಕೆ ಬೆಳೆ ಹೆಚ್ಚು ಮಾಡಲು ಸಾಧ್ಯವಿದೆ ಎಂದು ಹೇಳಿದರು.

66 ಲಕ್ಷ ಹೆಕ್ಟೇ□□ಗೆ ನೀರಾವರಿ ಮಾಡುವಷ್ಟು ಸಾಮಾರ್ಥ್ಯದ ನೀರು ರಾಜ್ಯದಲ್ಲಿ ಇದೆ. ಕೃಷ್ಣ ನ್ಯಾಯಾಧೀಕರಣ, ಕಾವೇರಿ ನ್ಯಾಯಾಧೀಕರಣದಲ್ಲಿ ಹಂಚಿಕೆಯಾದ ನೀರನ್ನು ಉಪಯೋಗ ಮಾಡಿಕೊಂಡು ಸುಮಾರು ಮೇಜರ್ ಇರಿಗೇಷ□□ನಿಂದ 30 ಲಕ್ಷ ಹೆಕ್ಟೇರ್ ನೀರಾವರಿ ಮತ್ತು ಮೈನರ್ ಇರಿಗೇಷ□□ನಿಂದ 7 ಲಕ್ಷ ಹೆಕ್ಟೇರ್ ನೀರಾವರಿ ಮಾಡಲಾಗಿದೆ. ರೈತರು ತಮ್ಮ ಸ್ವಂತ ಖರ್ಚಿನಲ್ಲಿ ಕೊಳವೆಬಾವಿ, ಹಳ್ಳ, ಕೊಳ್ಳ ನೀರಿನ ಮೂಲಗಳಿಂದ 16 ಲಕ್ಷ ಹೆಕ್ಟೇರ್ ನೀರಾವರಿ ಮಾಡಿಕೊಂಡಿದ್ದಾರೆ. ಇನ್ನೂ 13 ಲಕ್ಷ ಹೆಕ್ಟೇರ್ ನೀರಾವರಿ ಮಾಡುವ ಅವಕಾಶ ಇದ್ದು, ಇನ್ನೂ ಷ್ಟು ನೀರು ಲಭ್ಯವಿದೆ. ಕೃಷ್ಣ ನ್ಯಾಯಾಧೀಕರಣ–2ರಲ್ಲಿ 173 ಟಿಎಂಸಿ ನೀರು ಹಂಚಿಕೆಯಾಗಿದೆ ಎಂದು ತಿಳಿಸಿದ ಅವರು, ರೈತರಿಗೆ ನೀರು ಬಹಳ ಮುಖ್ಯವಾಗಿದ್ದು, ಹಳ್ಳ, ಕೊಳ್ಳ, ಕೆರೆಕಟ್ಟೆಗಳನ್ನು ಒತ್ತುವರಿ ಮಾಡದೇ ಅವುಗಳನ್ನು ಉಳಿಸುವ ಕೆಲಸ ಮಾಡಬೇಕು ಎಂದು ಸಂಸದರು ರೈತರಿಗೆ ಸಲಹೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ತೋಟಗಾರಿಕೆ ಕ್ಷೇತ್ರದಲ್ಲಿ ಜಿಲ್ಲೆಯ ರೈತರು ಉತ್ತಮ ಸಾಧನೆ ತೋರಿದ್ದು, ತೋಟಗಾರಿಕೆ ಬೆಳೆಗಳಲ್ಲಿ ಮುಂಚೂಣಿಯಲ್ಲಿದಾರೆ. ಚಿತ್ರದುರ್ಗ ಜಿಲ್ಲೆಯ ಬೆಂಗಳೂರಿಗೆ ಬಹಳ ಹತ್ತಿರ ಇರುವುದರಿಂದ ತೋಟಗಾರಿಕೆ ಬೆಳೆಗಳಲ್ಲಿ ರೈತರು ಪ್ರಯತ್ನ ಮಾಡಿದರೆ ಕೇವಲ 2 ರಿಂದ 3 ಗಂಟೆಯೊಳಗೆ ಬೆಂಗಳೂರು ಮಾರುಕಟ್ಟೆ ತಲುಪಬಹುದು. ಹಾಗಾಗಿ ಇತ್ತೀಚಿಗೆ ಹೂವು, ಹಣ್ಣು, ತರಕಾರಿ ಬೆಳೆಗಳನ್ನು ಬೆಳೆಯುವಂತಹದನ್ನು ನೋಡುತ್ತಿದ್ದೇವೆ. ಅದೇ ರೀತಿ ಸರ್ಕಾರದ ನೆರವಿನ ಅಗತ್ಯವೂ ಇದೆ ಎಂದು ಹೇಳಿದರು.

ಚಳ್ಳಕೆರೆಯಲ್ಲಿ ಎರಡು ಖಾಸಗಿ ಕೋಲ್ಡ್ ಸ್ಟೋರೇಜ್ ಬಿಟ್ಟರೆ ಜಿಲ್ಲೆಯ ಯಾವ ತಾಲ್ಲೂಕಿನಲ್ಲಿಯೂ ಕೋಲ್ಡ್ ಸ್ಟೋರೇಜ್ ಇಲ್ಲ. ಸಂಸದರ ಸೂಚನೆಯಂತೆ ರೂ.10 ಕೋಟಿ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಪ್ರಸ್ತಾವ ಸಿದ್ದಪಡಿಸಬೇಕು. ಇದರಿಂದ ಜಿಲ್ಲೆಯ ರೈತರು ಬೆಳೆದ ಎಲ್ಲ ಬೆಳೆಗಳಿಗೆ ಒಳ್ಳೆಯ ಮೌಲ್ಯವರ್ಧನೆಗೆ ಸಹಾಯಕವಾಗಲಿದೆ ಎಂದು ಹೇಳಿದರು.

ಇಡೀ ದೇಶದಲ್ಲಿ ಕರ್ನಾಟಕ ಅತೀ ಹೆಚ್ಚು ತೋಟಗಾರಿಕೆ ಬೆಳೆಯನ್ನು ಬೆಳೆಯುವ ರಾಜ್ಯಗಳಲ್ಲಿ (ಭೂಪ್ರದೇಶ–ವಿಸ್ತೀರ್ಣದಲ್ಲಿ) ನಂ.1 ಸ್ಥಾನದಲ್ಲಿದೆ. ಆದರೆ ಪ್ರೊಡಕ್ಷ□□ನಲ್ಲಿ 7ನೇ ಸ್ಥಾನದಲ್ಲಿದೆ. ಹಾಗಾಗಿ ಇದರ ಬಗ್ಗೆ ಅಲೋಚನೆ ಮಾಡಬೇಕು ಎಂದು ಹೇಳಿದರು.ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ರೈತರು ತಮ್ಮ ಬೆಳೆಗಳಲ್ಲಿ ಹೆಚ್ಚಿನ ಇಳುವರಿ ಹಾಗೂ ಆದಾಯ ಪಡೆಯಲು ಬಹಳಷ್ಟು ರಾಸಾಯನಿಕಗಳನ್ನು ಬಳಸುತ್ತಿದ್ದಾರೆ. ಇದರಿಂದ ಭೂಮಿಯು ವಿಷವಾಗಲಿದ್ದು, ಎಲ್ಲರೀತಿಯಿಂದಲೂ ವ್ಯತಿರಿಕ್ತವಾಗಲಿದೆ. ತೋಟಗಾರಿಕೆ ಬೆಳೆ ಬೆಳೆಯುವ ಪೂರ್ವದಲ್ಲಿ ತೋಟಗಾರಿಕೆ ಕಚೇರಿ, ಹಾರ್ಟಿಕ್ಲಿನಿ□□ಗಳಿಗೆ ಭೇಟಿ ನೀಡಿ, ಮಾಹಿತಿ ಪಡೆಯಬೇಕು. ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್, ತಹಶೀಲ್ದಾರ್ ಡಾ.ನಾಗವೇಣಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಜಿ.ಸವಿತಾ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹೇಶ್ವರಪ್ಪ, ಜಿಲ್ಲಾ ತೋಟಗಾರಿಕೆ ಸಲಹಾ ಸಮಿತಿ ಅಧ್ಯಕ್ಷ ಜಿ.ಎಸ್.ಉಜ್ಜನಪ್ಪ, ಖಜಾಂಚಿ ನಾಗರಾಜ್ ಬೇದ್ರೆ, ನಿರ್ದೇಶಕರಾದ ಶ್ವೇತಾ, ರೀನಾ, ಎಸ್.ಆರ್.ಗಿರೀಶ್ ಇದ್ದರು.

### ಕಣ್ಮನ ಸೆಳೆದ ಕಲಾಕೃತಿಗಳು

ಗುಲಾಬಿ, ಬಿಳಿ ಸೇವಂತಿ ಪುಷ್ಪಗಳಿಂದಲೇ ಸಿದ್ಧಪಡಿಸಿದ ಹೆಣ್ಣಿಗೆ ಗೌರವ ಸೂಚಿಸುವ ಕಲಾಕೃತಿ, ಸ್ವಾವಲಂಬಿ ರೈತ, ಮಯೂರ ವರ್ಮನ ಕಲಾಕೃತಿ, ವಾಣಿವಿಲಾಸ ಸಾಗರ ಅಣೆಕಟ್ಟಿನ ಕಲಾಕೃತಿ ಸೇರಿದಂತೆ ಆಕರ್ಷಕ ಬಣ್ಣದ ವಿವಿಧ ಜಾತಿಯ ಹೂಗಳಿಂದ ಹಲವಾರು ಕಲಾಕೃತಿಗಳು ಅರಳಿ ನಿಂತಿದ್ದು, ಈ ಕಲಾಕೃತಿಗಳು ಜನರ ಕಣ್ಮನ ಸಳೆಯುತ್ತಿವೆ. ವಿವಿಧ ಜಾತಿಯ ಹೂವು, ಹಣ್ಣುಗಳು, ತರಕಾರಿ, ಅಲಂಕಾರಿಕ ಗಿಡಗಳ ಪ್ರದರ್ಶನ ಜನರನ್ನು ಆಕರ್ಷಿಸಿದವು. ಫಲ–ಪುಷ್ಪಗಳ ನಡುವೆ ಜನರನ್ನು ಆಕರ್ಷಿಸಲು ಗ್ರಾಮೀಣ ಸೊಗಡು, ತರಕಾರಿ ಮನೆ, ಔಷಧೀಯ ಸಸ್ಯಗಳು ಸೇರಿ ಒಟ್ಟಾರೆ ಫಲ–ಪುಷ್ಪ ಪ್ರದರ್ಶನ ಪ್ರೇಕ್ಷಕರಿಗೆ ಮುದ ನೀಡಿತ್ತಿದೆ.

## ಫಾಸ್ಟ್ ನ್ಯೂಸ್

### ಫೆ.17ರಿಂದ ಬೆಂಬಲ ಬೆಲೆಯಲ್ಲಿ ತೊಗರಿ, ಕಡಲೇಕಾಳು ಖರೀದಿ

» ಚಿತ್ರದುರ್ಗ

ಕೇಂದ್ರ ಸರ್ಕಾರದ ಬೆಂಬಲಬೆಲೆ ಯೋಜನೆಯಡಿ 2024-25ನೇ ಸಾಲಿನಲ್ಲಿ ರೈತರು ಬೆಳೆದ ತೊಗರಿ ಹಾಗೂ ಕಡಲೇಕಾಳು ಖರೀದಿ ಮಾಡಲು ಎನ್‌ಸಿಸಿಎಫ್ ಸಂಸ್ಥೆಯ ಪರವಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತ ಪರವಾಗಿ ಜಿಲ್ಲೆಯ ಪಿಎಸಿಎಸ್, ಎಫ್‌ಪಿಒ, ಟಿಎಪಿಸಿಎಂಎಸ್‌ಗಳ ಮೂಲಕ ಖರೀದಿ ಕೇಂದ್ರಗಳನ್ನು ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಆರಂಭಿಸಲಾಗಿದ್ದು, ಇದೇ ಫೆ.17ರಿಂದ ರೈತರಿಂದ ನೋಂದಣಿ ಪ್ರಾರಂಭವಾಗಲಿದೆ. ರೈತರು ಆಧಾರ್ ಪ್ರತಿಯೊಂದಿಗೆ ನೋಂದಾವಣಿ ಕೇಂದ್ರಗಳಲ್ಲಿ ನೋಂದಾವಣಿ ಮಾಡಿಸಬೇಕಾಗಿರುತ್ತದೆ. ಮಾರ್ಚ್ 30 ನೋಂದಣಿಗೆ ಕೊನೆಯ ದಿನವಾಗಿದೆ. ್ರತಿ ರೈತರಿಂದ ಎಕರೆಗೆ ತೊಗರಿಯು 4 ಕ್ವಿಂಟಾಲ್‌ನಂತೆ ಗರಿಷ್ಟ ಮಿತಿಯು 40 ಕ್ವಿಂಟಾಲ್ ಪ್ರಮಾಣವಿರುತ್ತದೆ. ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ರೂ.7550/- ನಿಗಧಿಪಡಿಸಿರುತ್ತದೆ. ಪ್ರತಿ ರೈತರಿಂದ ಎಕರೆಗೆ ಕಡಲೇಕಾಳು 4 ಕ್ವಿಂಟಾಲ್‌ನಂತೆ ಗರಿಷ್ಟ ಮಿತಿಯು 20 ಕ್ವಿಂಟಾಲ್ ಪ್ರಮಾಣವಿರುತ್ತದೆ. ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ರೂ.5650/- ನಿಗಧಿಪಡಿಸಿದೆ.

ಖರೀದಿ ಕೇಂದ್ರಗಳ ವಿವರ: ಚಿತ್ರದುರ್ಗ ತಾಲ್ಲೂಕಿನಲ್ಲಿ ಚಿತ್ರದುರ್ಗ ನಗರದ ಪಿಎಸಿಎಸ್, ಮಾಡನಾಯಕನಹಳ್ಳಿ, ಚಿಕ್ಕಗೊಂಡನಹಳ್ಳಿ ಪಿಎಸಿಎಸ್ ಹಾಗೂ ಶ್ರೀ ಮಂಜುನಾಥಸ್ವಾಮಿ ಎಫ್‌ಪಿಒ, ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ಚಿಕ್ಕಮಧುರೆ ಪಿಎಸಿಎಸ್, ಹಿರಿಯೂರು ತಾಲ್ಲೂಕಿನ ಭರಂಪುರ, ಮರಡಿಹಳ್ಳಿ, ಬಬ್ಬೂರು ಪಿಎಸಿಎಸ್, ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿ ಪಿಎಸಿಎಸ್, ಮೊಳಕಾಲ್ಮುರಿನ ಟಿಎಪಿಸಿಎಂಎಸ್ ಹಾಗೂ ಹೊಸದುರ್ಗ ತಾಲ್ಲೂಕಿನಲ್ಲಿ ಶ್ರೀ ರಾಮಲಿಂಗೇಶ್ವರ ಹಾರ್ಟಿಕಲ್ಚರ್ ಫಾರ್ಮರ್‌ನಲ್ಲಿ ಖರೀದಿ ಕೇಂದ್ರ ಪ್ರಾರಂಭಿಸಲಾಗಿದ್ದು, ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಚಿತ್ರದುರ್ಗ ಶಾಖಾ ವ್ಯವಸ್ಥಾಪಕ ಎಸ್.ಬಸವೇಶ್ ನಾಡಿಗರ್ ತಿಳಿಸಿದ್ದಾರೆ.

### ಅಕ್ರಮ ಮರಳು ಸಾಗಾಣಿಕೆ ಸಂಬಂಧ ಸಹಾಯವಾಣಿ ಕೇಂದ್ರ

» ದಾವಣಗೆರೆ

ಅಕ್ರಮ ಮರಳು ಸಾಗಾಣಿಕೆಯನ್ನು ತಡೆಗಟ್ಟಲು ತಾಲ್ಲೂಕಿನ ವಿವಿಧ ಇಲಾಖೆಗಳ ಒಳಗೊಂಡಂತೆ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ತಂಡವನ್ನು ರಚಿಸಿ ಅಕ್ರಮ ಮರಳು ಸಾಗಾಣಿಕೆಯನ್ನು ತಡೆಗಟ್ಟಲು ಹಗಲು ಮತ್ತು ರಾತ್ರಿ ಪಾಳೆಯದಲ್ಲಿ ಕರ್ತವ್ಯ ನಿರ್ವಹಿಸುವರು. ಸಾರ್ವಜನಿಕರಿಂದ ಮಾಹಿತಿ ಪಡೆಯಲು ಸಹಾಯವಾಣಿ ಕೇಂದ್ರ ತೆರೆಯಲಾಗಿದೆ. ಅಕ್ರಮ ಮರಳು ಸಾಗಾಣಿಕೆ ಸಂಬಂಧ" ಸಾರ್ವಜನಿಕರು ಯಾವುದೇ ದೂರುಗಳು ಅಥವಾ ಮಾಹಿತಿಯನ್ನು ದೂ.ಸಂ 08192-240751 ಸಹಾಯವಾಣಿಗೆ ದಿನ 24 ಗಂಟೆ ಅವಧಿಯಲ್ಲಿ ಕರೆ ಮಾಡಬಹುದಾಗಿದೆ ಎಂದು ಹರಿಹರ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ಅನಾಮಧೇಯ ಮಹಿಳಾ ಶವ ಪತ್ತೆ

» ದಾವಣಗೆರೆ

ನಗರದ ಬೂದಾಳ್ ರೋಡ್ ಪೆಟ್ರೋಲ್ ಬಂಕ್ ಕಾಂಪೌಂಡ್‌ಗೆ ಹೊಂದಿಕೊಂಡಂತೆ ಬಿ.ಎನ್ ಲೇಔಟ್ ಎ.ಎಂ ಕರಾಟೆ ಶಾಲೆಯ ಆನೆಕೊಂಡ ಚಂದ್ರಶೇಖರ್ ರವರೆಗೆ ಸೇರಿದ ಜಾಗದ ಪಕ್ಕದ ರಸ್ತೆಯಲ್ಲಿ ಸುಮಾರು 40 ರಿಂದ 45 ವಯಸ್ಸಿನ ಅನಾಮಧೇಯ ಮಹಿಳಾ ಮೃತ ದೇಹ ದೊರೆತಿದೆ.

**ಮೃತರ ಚಹರೆ:** 5.3 ಅಡಿ ಎತ್ತರ, ದೃಢವಾದ ಮೈಕಟ್ಟು, ಕಪ್ಪು ಕೂದಲು, ಕಪ್ಪು ಬಿಳಿ ಹಳದಿ ಬಣ್ಣದ ಚೂಡಿಧರ ಕಪ್ಪು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾರೆ. ಮೃತರ ಹೆಸರು ವಿಳಾಸ, ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ. ಮಾಹಿತಿ ದೊರೆತಲ್ಲಿ ಬಡಾವಣೆ ಪೊಲೀಸ್ ಇನ್ಸ್ ಪೆಕ್ಟರ್ 08192-234865, 9480803251, 259213 ಸಂಖ್ಯೆಗಳಿಗೆ ಕರೆ ಮಾಡಿ ಮಾಹಿತಿ ನೀಡಲು ಪೊಲೀಸ್ ಉಪನಿರೀಕ್ಷಕರು ತಿಳಿಸಿದ್ದಾರೆ.

### 4ಜಿ ಸಿಮ್ ಅಪ್‌ಗ್ರೇಡ್

» ದಾವಣಗೆರೆ

ಬಿಎಸ್‌ಎನ್‌ಎಲ್ ತನ್ನ ನೆಟ್‌ವರ್ಕ ಅನ್ನು 4ಜಿ ಗೆ ಅಪ್ ಗ್ರೇಡ್ ಮಾಡಲಾಗಿದೆ. ವೇಗವಾದ ಇಂಟರ್‌ನೆಟ್ ಸುಧಾರಿತ ಸಂಪರ್ಕ ಮತ್ತು ಹೆಚ್ಚು ವಿಶ್ವಾಸಾರ್ಹ ಸೇವೆಯನ್ನು ಒದಗಿಸಲಾಗುತ್ತದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸುಧಾರಿತ ಸಂಪರ್ಕವನ್ನು ಅನುಭವಿಸಬಹುದು. 4ಜಿ ವೇಗದ ಅನುಭವಕ್ಕಾಗಿ ಎಲ್ಲಾ ಬಿಎಸ್‌ಎನ್‌ಎಲ್ ಗ್ರಾಹಕರು ನಿಮ್ಮ ಆಸ್ತಿತ್ವದಲ್ಲಿರುವ 2ಜಿ, 3ಜಿ ಸಿಮ್‌ನ್ನು 4ಜಿ ಸಿಮ್‌ಗೆ ಯಾವುದೇ ಬಿಎಸ್‌ಎನ್‌ಎಲ್ ಕಚೇರಿಯಲ್ಲಿ ಅಥವಾ ರಿಟೇಲರ್‌ಗಳ ಅಂಗಡಿಯ ಬಳಿ ಉಚಿತವಾಗಿ ಅಪ್‌ಗ್ರೇಡ್ ಮಾಡಿ ಎಂದು ಡಿಜಿಎಂ ತಿಳಿಸಿದ್ದಾರೆ.

## ಸಂತ ಶ್ರೀ ಸೇವಾಲಾಲ್ ಜಯಂತಿಯಲ್ಲಿ ಸಾಹಿತಿ ಖಂಡೂ ಬಂಜಾರ

# ಎಲ್ಲರಿಗೂ ಒಳ್ಳೆಯದನ್ನೇ ಬಯಸಿದ ಸೇವಾಲಾಲ್

» ಚಿತ್ರದುರ್ಗ


ಭೂಮಿಯ ಮೇಲಿರುವ ಸಕಲ ಜೀವರಾಶಿಗಳಿಗೂ ಒಳ್ಳೆಯದನ್ನೇ ಬಯಸಿದವರು ಸಂತ ಶ್ರೀ ಸೇವಾಲಾಲ್ ಎಂದು ಕೊಳಹಾಳ್ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಹಾಗೂ ಸಾಹಿತಿ ಖಂಡೂ ಬಂಜಾರ (ಬಿ.ಕೆ.ನಾಯ್ಕ್) ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಂತ ಶ್ರೀ ಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಪಂಚದಲ್ಲಿ ಇರುವವರೆಲ್ಲರಿಗೂ ಒಳ್ಳೆಯದಾಗಲಿ ಎಂದು ಲೇಸನ್ನು ಬಯಸಿದ ಸಂತ ಸೇವಾಲಾಲ್ ಅವರು, ಮರ ಕಡೆದು ಜೀವ ಇಲ್ಲದಿರುವ ಒಣಗಿದ ಬಡ್ಡೆಯೂ ಸಹ ಚಿಗುರೊಡೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಿದ ಏಕೈಕ ವ್ಯಕ್ತಿ ಎಂದು ಹೇಳಿದರು.

ನಮ್ಮ ದೇಹದಲ್ಲಿರುವ ಕಾಮ, ಕ್ರೋಧ, ಲೋಭ, ಮೋಹ, ಮದ, ಮಾತ್ಸರ್ಯ ಎಂಬ ಅರಿಷಡ್ವರ್ಗಗಳನ್ನು ಸುಟ್ಟು ಹಾಕಬೇಕು. ಸತ್ಯ ಮತ್ತು ಧರ್ಮವನ್ನು ಮುನ್ನಡೆಸಬೇಕು. ಜೊತೆಗೆ ನಿಮಗೆ ಕೈಲಾದರೆ ಹಸಿದವರಿಗೆ ಅನ್ನ, ನೀರು ಕೊಡಿ ಎಂಬ ಸಂದೇಶವನ್ನು ಸಂತ ಸೇವಾಲಾಲ್ ಅವರು ಸಾರಿದ್ದಾರೆ ಎಂದರು.

ಸಂತ ಶ್ರೀ ಸೇವಾಲಾಲ್ ಅವರ ತತ್ವಾದರ್ಶ, ಮಾರ್ಗದರ್ಶನಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಿಸಲು ನಾವೆಲ್ಲರೂ



ಶ್ರಮಿಸೋಣ ಎಂದು ಹೇಳಿದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಬಂಜಾರ ಎಂಬುವುದು ಒಂದು ಜಾತಿ ಅಲ್ಲ. ಅದೊಂದು ಸಂಸ್ಕೃತಿ. ಅವರ ಕರಕುಶಲತೆ ವಿಭಿನ್ನ ಹಾಗೂ ವಿಶಿಷ್ಟ, ಸೃಜನಶೀಲತೆಯಿಂದ ಕೂಡಿದೆ ಎಂದು ಹೇಳಿದರು. ಬಂಜಾರ ಸಮುದಾಯ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ತಮ್ಮ ದುಡಿಮೆಯ ಜೊತೆಗೆ ಸರ್ಕಾರದ ಮೀಸಲಾತಿ, ಸೌಲಭ್ಯ ಸದ್ಬಳಕೆ ಮಾಡಿಕೊಂಡು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಶಿಕ್ಷಣದಿಂದ ಮಾತ್ರ ಮಾರ್ಪಾಡು ಸಾಧ್ಯ ಎಂದು ಹೇಳಿದರು.

ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಮಾತನಾಡಿ, ಸಮುದಾಯ ಹಾಗೂ ಇತಿಹಾಸದ ಉಳಿವಿಗಾಗಿ ಸಂಘಟನೆ ಅವಶ್ಯಕವಾಗಿದೆ. ಸಂಸ್ಕೃತಿ, ಸಂಸ್ಕಾರ ಉಳಿಸಿಕೊಂಡು ಮುಂದಿನ ಪೀಳಿಗೆ ಕೊಂಡ್ಯೊಯುವ ಕೆಲಸವಾಗಬೇಕು ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಕಾರ್ಯದರ್ಶಿ ಕೆ.ಮಂಜುನಾಥ ನಾಯ್ಕ್ ಮಾತನಾಡಿ, ಪ್ರತಿ ವರ್ಷದಂತೆ ಈ ಬಾರಿಯೂ ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ದಾರ್ಶನಿಕರು, ಸಮಾಜ ಸೇವಕರು, ಪಾವಡ ಪುರುಷರು, ಗೋಪಾಲಕರು, ಸಂತರು, ಶ್ರೇಷ್ಠರೂ ಎನಿಸಿಕೊಂಡಿರುವ ಸಂತ ಶ್ರೀ ಸೇವಾಲಾಲ್ ಜಯಂತಿ ಆಚರಣೆ ಮಾಡುತ್ತಿರುವುದು ಸ್ವಾಗತಾರ್ಹ ವಿಚಾರವಾಗಿದೆ ಎಂದರು.

ಎಲ್ಲ ಜನಾಂಗದಲ್ಲಿಯೂ ಶ್ರೇಷ್ಠ ದಾರ್ಶನಿಕರು ಹುಟ್ಟಿ ತಮ್ಮ ಜ್ಞಾನವನ್ನು ಜನಾಂಗಕ್ಕೆ ಹಾಗೂ ಸಮಾಜಕ್ಕೆ ಧಾರೆ ಎರೆದಿದ್ದಾರೆ. ಸಂತ ಶ್ರೀ ಸೇವಾಲಾಲ್ ಅವರು ಮಹಾಜ್ಞಾನಿಯೂ ಹಾಗೂ ತ್ರಿಕಾಲ ಜ್ಞಾನಿ ಎಂತಲೂ ಕರೆಯುತ್ತೇವೆ ಎಂದರು. ನಮ್ಮ ಬಂಜಾರ ಭಾಷೆ ಇಡೀ ವಿಶ್ವದಲ್ಲಿಯೇ ಒಂದು ತರನಾಗಿದೆ ಎಂದು ತಿಳಿಸಿದ ಅವರು, ಅನೇಕ ಲಾವಣಿ ಪದಗಳು, ಲಂಬಾಣಿ ನೃತ್ಯಗಳು, ಭಜನೆ ಹೀಗೆ ಅನೇಕ ಬಂಜಾರ ಸಂಸ್ಕೃತಿಯ ಮೂಲಕ ಸಂತ ಶ್ರೀ ಸೇವಾಲಾಲ್ ಅವರನ್ನು ಸ್ಮರಿಸಿಕೊಳ್ಳಲಾಗುತ್ತದೆ ಎಂದು ಹೇಳಿದರು. ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಅಧ್ಯಕ್ಷ ಆರ್. ನಾಗೇಂದ್ರನಾಯ್ಕ ಮಾತನಾಡಿ, ಮೂರು ಶತಮಾನಗಳ ಹಿಂದೆಯೇ ಸಮಾಜವನ್ನು ಸಂಘಟಿಸಿರುವಂತಹ ಮಹಾನ್ ಗುರುಗಳಾದ ಸೇವಾಲಾಲ್ ಅವರ ಆದರ್ಶಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ನಿಜವಾಗಿಯೂ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಿದೆ ಎಂದು ಹೇಳಿದರು.

ಸರ್ಕಾರದ ಸವಲತ್ತು ಪಡೆಯಲು ಸಹ ನಾವು ಸಂಘಟನೆಯಾಗಬೇಕು. ಯಾವುದೇ ಸಮುದಾಯ ಮುಖ್ಯವಾಹಿನಿಗೆ ಬರಲು ಶಿಕ್ಷಣ ಬಹಳ ಮುಖ್ಯ. ಶಿಕ್ಷಣ ಕೊಟ್ಟಾಗ ಮಾತ್ರ ಸಮುದಾಯ ಮುಖ್ಯವಾಹಿನಿಗೆ ಬರಲಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಕೊಡುವ, ಆರ್ಥಿಕವಾಗಿ ಹಿಂದುಳಿದವರಿಗೆ ಶಿಕ್ಷಣ ಕೊಡುವ ಕೆಲಸ ಮಾಡಬೇಕಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಅವರಿಗೆ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಗೌರವಾಧ್ಯಕ್ಷ ಜಿ.ರಾಜನಾಯ್ಕ, ಮುಖಂಡರಾದ ಮಾಧವ ನಾಯ್ಕ್, ಪ್ರಕಾಶ್ ರಮಾನಾಯ್ಕ್, ವಸಂತ್ ನಾಯ್ಕ್, ರಮೇಶ್ ನಾಯ್ಕ್, ದುರ್ಗ ನಾಯ್ಕ್, ರಮೇಶ್ ನಾಯ್ಕ್, ಸುಮೀತ್ ನಾಯ್ಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು. ಹೊಸದುರ್ಗ ತಾಲ್ಲೂಕು ಪೀಲಾಪುರ ಗ್ರಾಮದ ಕಂಠೇಶ್ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

# ಮೈಕ್ರೋಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತ ಸುಗ್ರೀವಾಜ್ಞೆ ಅನುಷ್ಠಾನ: ಮುಖ್ಯಮಂತ್ರಿ ಸಿದ್ಧರಾಮಯ್ಯ

» ಚಿತ್ರದುರ್ಗ

ಕರ್ನಾಟಕ ಸರ್ಕಾರವು ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತರದ ಕ್ರಮಗಳ ಪ್ರತಿಬಂಧಕ) ಆಧ್ಯಾದೇಶ-2025 ಸುಗ್ರೀವಾಜ್ಞೆಯನ್ನು ಜಾರಿಗೊಳ್ಳಿಸಿದ್ದು, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತು ಅನುಷ್ಠಾನದಲ್ಲಿರುವ ಸುಗ್ರೀವಾಜ್ಞೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಹೆಚ್ಚು ಅಧಿಕಾರಗಳನ್ನು ನೀಡಿದ್ದು, ಸಾಲಗಾರರಿಗೆ ಯಾವುದೇ ರೀತಿಯ ಕಿರುಕುಳ ಆಗದಂತೆ ಮುನ್ನೆಚ್ಚರಿಗೆ ವಹಿಸಬೇಕು. ಮತ್ತು ನಿಯಮಾನುಸಾರ ಸಾಲಕೊಡುವವರಿಗೂ ತೊಂದರೆಯಾಗದಂತೆ ಗಮನಹರಿಸಬೇಕೆಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಹೇಳಿದರು.

ವಿಡಿಯೋ ಕಾನ್ಫರೆನ್ಸ್ ಮೂಲಕ ಶನಿವಾರ ಜಿಲ್ಲಾಧಿಕಾರಿಗಳೊಂದಿಗೆ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತು ಹೊರಡಿಸಲಾಗಿರುವ ಸುಗ್ರೀವಾಜ್ಞೆಯ ಅನುಷ್ಠಾನ ಕುರಿತು ಸಭೆ ಜರುಗಿಸಿ ಮಾತನಾಡಿದರು.

ಸುಗ್ರೀವಾಜ್ಞೆಯಿಂದ ನಿಯಮಾನುಸಾರ ಸಾಲ ನೀಡುವ ಲೇವಾದೇವಿಗಾರರಿಗೆ ಹಾಗೂ ಮನಿಲ್ಯಾಂಡರ್ ಅವರಿಗೆ ತೊಂದರೆ, ಕಿರುಕುಳ ಆಗದಂತೆ ಅಧಿಕಾರಿಗಳು ಗಮನ ಹರಿಸಬೇಕು. ಬಡವರು, ಮಹಿಳೆಯರು ಮತ್ತು ರೈತರಿಗೆ ಸಾಲ ವಸೂಲಾತಿಗಾಗಿ ಮೈಕ್ರೋ ಫೈನಾನ್ಸ್‌ದವರಿಂದ ಯಾವುದೇ ಕಿರುಕುಳ, ತೊಂದರೆ ಆಗದಂತೆ ಕ್ರಮ ಕೈಗೊಳ್ಳುವ ಉದ್ದೇಶದಿಂದ ಈ ಸುಗ್ರೀವಾಜ್ಞೆಯನ್ನು ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಬೆಳಿಗ್ಗೆ 9 ಗಂಟೆಗೆ ಮೊದಲು ಮತ್ತು ಸಂಜೆ 6 ಗಂಟೆಯ ನಂತರ ಸಾಲಗಾರರ ಮನೆಗೆ ಸಾಲ



ವಸೂಲಾತಿಗಾಗಿ ಹೋಗಬಾರದು. ಬಲವಂತದ ವಸೂಲಾತಿಯನ್ನು ತಡೆಯಲು ಈ ಕಾನೂನು ಜಾರಿ ಮಾಡಲಾಗಿದೆ. ರಾಜ್ಯದಲ್ಲಿ 2022 ರಿಂದ 2025ರವರೆಗೆ ಇಂತಹ ಪ್ರಕರಣಗಳನ್ನು ಗಮನಿಸಿದಾಗ ಕಳದ 2 ತಿಂಗಳಲ್ಲಿ ಪ್ರಕರಣಗಳು ರಾಜ್ಯದಲ್ಲಿ ಹೆಚ್ಚಾಗಿವೆ. ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಪಡೆದವರಿಗೆ ಆಗುವ ಕಿರುಕುಳವನ್ನು ತಪ್ಪಿಸಲು ಸುಗ್ರೀವಾಜ್ಞೆ ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸುಗ್ರೀವಾಜ್ಞೆಯನ್ನು ಅಧಿಕಾರಿಗಳು ಸರಿಯಾಗಿ ಅಧ್ಯಯನ ಮಾಡಿ, ಜಾರಿ ಮಾಡಬೇಕು. ಡಿಸಿ, ಎಸ್.ಪಿ ಅವರು ಆಸಕ್ತಿ ವಹಿಸಿ ಕಾರ್ಯನಿರ್ವಹಿಸಬೇಕು. ಮುಂದಿನ ದಿನಗಳಲ್ಲಿ ಎಲ್ಲ ಜಿಲ್ಲೆಗಳಲ್ಲಿ ಸಾಲ ವಸೂಲಾತಿಗಾಗಿ ಅನಗತ್ಯ ಕಿರುಕುಳ, ತೊಂದರೆ ಆಗುವಂತಹ ಪ್ರಕರಣಗಳನ್ನು ನಿಯಂತ್ರಿಸಿ, ಪ್ರಕರಣಗಳು ಶೂನ್ಯ ಆಗುವಂತೆ ಕ್ರಮಕೈಗೊಳ್ಳಲು ಮುಖ್ಯಮಂತ್ರಿಗಳು ನಿರ್ದೇಶಿಸಿದರು.

ರಾಜ್ಯಸರ್ಕಾರದಮುಖ್ಯಕಾರ್ಯದರ್ಶಿಗಳಾದ ಶಾಲಿನಿ ರಜನೀಶ ಅವರು ವಿಡಿಯೋ ಸಂವಾದ ನಿರ್ವಹಿಸಿ, ಡಿಸಿ, ಎಸ್‌ಪಿಗಳಿಗೆ ನಿರ್ದೇಶನ ನೀಡಿ, ಮುಖ್ಯಮಂತ್ರಿಗಳು ನೀಡಿದ ಸಲಹೆ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಡಿ. ವೆಂಕಟೇಶ್ ಅವರು, ರಾಜ್ಯ ಸರ್ಕಾರ ಜಾರಿಗೊಳಿಸಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತ ಸುಗ್ರೀವಾಜ್ಞೆಯನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು. ಮತ್ತು ಮೈಕ್ರೋ ಫೈನಾನ್ಸ್‌ದಾರರು, ಲೇವಾದೇವಿಗಾರರು, ಪಾನ್‌ಬ್ರೋಕರ್‌ಗಳ ಸಭೆ ಕರೆದು ಮತ್ತೊಮ್ಮೆ ತಿಳುವಳಿಕೆ ನೀಡಲಾಗುವುದು. ಸಾರ್ವಜನಿಕರಲ್ಲಿ ಸುಗ್ರೀವಾಜ್ಞೆಕುರಿತುಜಾಗೃತಿಮೂಡಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಕಾಂಗ್ರೆಸ್‌ನವರು ದಲಿತ ಸಿಎಂ ಮಾಡಲ್ಲ: ಸಂಸದ ಕಾರಜೋಳ

**ಚಿತ್ರದುರ್ಗ:** ಸ್ವತಂತ್ರ ಬಂದ ನಂತರ 70 ವರ್ಷದಲ್ಲಿ, 60 ವರ್ಷ ಕಾಂಗ್ರೆಸ್ ಅಧಿಕಾರ ಚಲಾಯಿಸಿದೆ ಕೈ ಆಡಳಿತದಲ್ಲಿ ಕುರ್ಚಿ ಕಂಟಕ ಬಂದಾಗ ಮತದಾರರು ಅವರನ್ನು ತಿರಸ್ಕರಿಸಿದಾಗ ಹೊಸ ನಾಟಕ ಶುರು ಮಾಡ್ತಾರೆ ಬಯಲಾಟ, ದೊಡ್ಡಾಟ ಅಡುವ ನಾಟಕ ಕಂಪನಿ ಈ ಸರ್ಕಾರ ಕಂದಿಲು ಬೆಳಕಲ್ಲಿ ನಡೆಯುವ ನಾಟಕ ಕಂಪನಿ ಕಾಂಗ್ರೆಸ್ ಸರ್ಕಾರ ಇಂತಹ ಗಿಮಿಕ್ ಬಹಳ ಮಾಡಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.ಚಿತ್ರದುರ್ಗದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದರು. ಕಾಂಗ್ರೆಸ್ ನಲ್ಲಿ ದಲಿತ ಸಿಎಂ ಕೂಗು ವಿಚಾರ ಕಾಂಗ್ರೆಸ್ ನವರು ದಲಿತ ಸಿಎಂ ಮಾಡಲ್ಲ* ಧೀರ್ಘಾವಧಿ ಅಧಿಕಾರದಲ್ಲಿದ್ದ ಖರ್ಗೆಯವರನ್ನೇ ಸಿಎಂ ಮಾಡಲಿಲ್ಲನರಿಗದ್ದಲ ಕೈ ನಾಯಕರಿಗೆ ಎಂದೂ ಕೇಳುವುದಿಲ್ಲ ಕಾಂಗ್ರೆಸ್ಸನ್ನು ದಲಿತರೆಲ್ಲಾ ಸೇರಿ ಚಿಂದಿ ಮಾಡಿದಾಗ ಅವರಿಗೆ ಬುದ್ಧಿ ಬರಲಿದೆ ಎಂದ ಅವರು, ಎಸಿಪಿ ಟಿಎಸ್ಪಿ ಹಣ ದುರುಪಯೋಗ ಮಾಡಿಕೊಂಡ ಸರ್ಕಾರಕ್ಕೆ ನೈತಿಕತೆ ಇಲ್ಲ ದಲಿತರ ಸಮಾವೇಶ ನಡೆಸುವ ನೈತಿಕತೆ ಕಾಂಗ್ರೆಸ್‌ಗೆ ಇಲ್ಲ ಸದ್ಯ ರಾಜ್ಯದಲ್ಲಿ ಆರ್ಥಿಕವಾಗಿ ಸರ್ಕಾರ ದಿವಾಳಿಯಾಗಿದೆಕು9 ವಿ.ವಿ ಗಳನ್ನು ಮುಚ್ಚುತ್ತಿರೋದು ಆರ್ಥಿಕ ದಿವಾಳಿ ಎದ್ದು ಕಾಣ್ತಿದೆಸರ್ಕಾರದ ಭೂಮಿಯನ್ನು ಕಾಂಗ್ರೆಸ್ ನುಂಗಿ ಹಾಕಿದೆ* ನೂರಾರು ಎಕರೆ ಜಾಗ ಕೊಟ್ಟು ವಿಶ್ವವಿದ್ಯಾಲಯ ಮುಚ್ಚದಂತೆ ಉಳಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು. ಮೈಸೂರಿನ ಉದಯಗಿರಿಯಲ್ಲಿ ಗಲಾಟೆ ಪ್ರಕರಣ ಹಿನ್ನೆಲೆಯಲ್ಲಿ ಮಾತನಾಡಿದ ಸಂಸದರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಉದಯಗಿರಿ ಒಂದೇ ಅಲ್ಲ, ಹುಬ್ಬಳ್ಳಿ ಗಲಾಟೆ ಠಾಣೆ ಮುತ್ತಿಗೆ ಹಾಕಿದರು, ಪೊಲೀಸರ ಮೇಲೆ ಹಲ್ಲೆ ನಡೆಸಿದರು ಸ್ವಾತಂತ್ರ್ಯ ಬಂದ್ಮೇಲೆ ನಮ್ಮ ಪೂರ್ವಜರು ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಅಧಿಕಾರ ನಡೆಸಿದ್ದಾರೆ ಪೊಲೀಸ್ ಠಾಣೆ ಮೇಲೆ ಅಟ್ಯಾಕ್, ಪೊಲೀಸರ ಮೇಲೆ ದೌರ್ಜನ್ಯ ನಡೆಸಿದವರನ್ನು ಎಂದೂ ಬಿಟ್ಟಿಲ್ಲ ಇಂದು ಗೂಂಡಗಳು,ಕೋಮುವಾದಿ ಗಲಭೆ ಹುಟ್ಟಿಸಿ, ಅಂಶಾಂತಿ ನಿರ್ಮಾಣ ಇಂತವರಿಗೆ ಪ್ರೋತ್ಸಾಹಿಸುವ ಸರ್ಕಾರ ಅಧಿಕಾರದಲ್ಲಿದೆ ಇದನ್ನು ಖಂಡಿಸುತ್ತೇನೆ ಎಂಟು ದಿನಗಳ ಬಳಿಕ ಸಿಎಂ ಸಿದ್ದರಾಮಯ್ಯ ಮೈಸೂರಿಗೆ ತೆರಳಿ ಸಭೆ ನಡೆಸಿದ್ದಾರೆ ಯಾರನ್ನು ಬಿಡಲ್ಲವೆಂದು ಕೆಲವು ಪದಗಳನ್ನು ಬಳಸಿದ್ದಾರೆ ಗೃಹಮಂತ್ರಿ, ಡಿಸಿಎಂ,ಸಿಎಂ ಯಾರನ್ನು ಬಿಡಲ್ಲವೆಂದು ಹೇಳಿದ್ದಾರೆ ಯಾರನ್ನು ಬಿಡಲ್ಲ ಅನ್ನೋದನ್ನು ಸಾಬೀತು ಮಾಡಿ ತೋರಿಸಬೇಕು ಎಫ್ ಐ ಆರ್ ನಲ್ಲಿ ಸಾವಿರ ಮಂದಿ ಇದ್ದರು 13 ಮಂದಿ ಬಂಧಿಸಿರುವ ನಿಮಗೆ ನಾಚಿಕೆ ಆಗಬೇಕು.

## ಪ್ರಮುಖ ಸುದ್ದಿ

# ಫಲಿತಾಂಶ ಹೆಚ್ಚಳಕ್ಕೆ ಶ್ರಮಿಸಿ; ಉಪನಿರ್ದೇಶಕ ಪುಟ್ಟಸ್ವಾಮಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಈ ಬಾರಿಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶಕ್ಕೆ ಹೆಚ್ಚಳಕ್ಕೆ ಶ್ರಮಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಪುಟ್ಟಸ್ವಾಮಿ ಹೇಳಿದರು.

ನಗರದಬಾಲಕರಸರ್ಕಾರಿಪದವಿಪೂರ್ವ ಕಾಲೇಜ್ ಆವರಣದಲ್ಲಿ ಈಚೆಗೆ ಆಯೋಜಿಸಿದ್ದ ಶೈಕ್ಷಣಿಕ ಚಟುವಟಿಕೆಗಳ ಸಮಾರೋಪ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ ಫಲಿತಾಂಶ ಬಹಳ ಕಡಿಮೆ ಇದ್ದು, ಈ ಬಾರಿಯ ಫಲಿತಾಂಶ ಉನ್ನತಕ್ಕೆ ಕೊಂಡೊಯ್ಯುವ ಹೊಣೆಗಾರಿಕೆ ಇಲಾಖೆ ನಮ್ಮೆಲ್ಲರಿಗೂ ವಹಿಸಿದೆ.ಇದಕ್ಕೆಮುಖ್ಯವಾಗಿವಿದ್ಯಾರ್ಥಿಗಳ ಸಹಕಾರ ಬೇಕು. ಇಲ್ಲದಿದ್ದರೇ ಏಕಮುಖ ಶ್ರಮ, ಬದ್ಧತೆ ಉಪಯೋಗ ಆಗುವುದಿಲ್ಲ ಎಂದರು.

ಫಲಿತಾಂಶ ಹೆಚ್ಚಳಕ್ಕೆ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಜತೆಗೆ ಗುಂಪು ಓದು, ಚರ್ಚೆ ಮೂಲಕ ಪರೀಕ್ಷೆಗೆ ವಿದ್ಯಾರ್ಥಿಗಳನ್ನು



ಸನ್ನದ್ಧರನ್ನಾಗಿಸಲಾಗುತ್ತಿದೆ. ಇಲಾಖೆ ನೀಡಿದ ಗುರಿ ಮುಟ್ಟುವ ಹೊಣೆಗಾರಿಕೆ ಗುರುಗಳೇ ಮೇಲಿದ್ದರೇ, ಭವಿಷ್ಯ ರೂಪಿಸಿಕೊಳ್ಳುವ ಗುರಿ ನಿಮ್ಮಲ್ಲಿರಬೇಕು ಎಂದು ಹೇಳಿದರು.

ಭವಿಷ್ಯ ರೂಪಿಸಿಕೊಳ್ಳಲು, ಸಾಧನೆ ಗುರಿ ಮುಟ್ಟಲು ಛಲದೊಂದಿಗೆ ನಿರಂತರ ಅಧ್ಯಯನ, ಓದು, ಬರವಣಿಗೆ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿ ಜೀವನದಲ್ಲಿ ಮಾತ್ರ ಕಲಿಕೆ ಎಂಬ ಮನೋಭಾವ ಕೈಬಿಡಬೇಕು. ಕಲಿಕೆ ನಿರಂತರವಾಗಿರಬೇಕು. ಸದಾ ವಿದ್ಯಾರ್ಥಿ ಆಗಿರಬೇಕು. ಆಗ ಮಾತ್ರ ಜೀವನದಲ್ಲಿ ವಿಶೇಷ ಸಾಧನೆ ಮಾಡಲು ಸಾಧ್ಯ ಎಂದರು.ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎಚ್.ಬಿ.ನರಸಿಂಹಮೂರ್ತಿ ಮಾತನಾಡಿ, ಸರ್ಕಾರಿ ಶಾಲೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಬಹಳ ಪ್ರಾಮಾಣಿಕವಾಗಿ ಓದಿ ಇಲ್ಲಿಗೆ ಬಂದಿರುತ್ತಾರೆ. ಜತೆಗೆ ಇಲ್ಲಿ ಶಿಕ್ಷಕರು ಕೂಡ ಹೆಚ್ಚು ಅಂಕ ಗಳಿಸಿ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಉದ್ಯೋಗಕ್ಕೆ ಸೇರ್ಪಡೆ ಆಗಿರುತ್ತಾರೆ ಎಂದರು.ಸರ್ಕಾರಿ ಶಾಲೆಗಳಲ್ಲಿ ಓದಿದವರೇ ಸರ್ಕಾರಿ ಸೇರಿ ವಿವಿಧ ಸಂಸ್ಥೆಗಳು, ಕ್ಷೇತ್ರಗಳ ಉನ್ನತ ಹುದ್ದೆಗಳಲ್ಲಿ ಇದ್ದಾರೆ. ಆದರೂ ಸರ್ಕಾರಿ ಶಾಲೆ ಎಂದಾಕ್ಷಣ ಮೂಗು ಮುರಿಯುವ ಜನರೇ ಹೆಚ್ಚು. ಈ ಮನಸ್ಥಿತಿಯಿಂದ ಜನ ಹೊರಬರಬೇಕು ಎಂದು ಹೇಳಿದರು.

ಹಿರಿಯ ಉಪನ್ಯಾಸಕ ಪ್ರೊ.ಬಿ.ಕೃಷ್ಣಪ್ಪ ಮಾತನಾಡಿ, ಒಂದೇ ಕಟ್ಟಡದಲ್ಲಿ ಕಾಲೇಜ್ ಮತ್ತು ಪ್ರೌಢಶಾಲೆ ಇದೆ. ನಾವೆಲ್ಲರೂ ಸಹೋದರರ ರೀತಿ ಇದ್ದೇವೆ. ಇಲ್ಲಿ ಕೊಠಡಿಗಳ ಸಮಸ್ಯೆ ಇತ್ತು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ತಮ್ಮ ಅನುದಾನದಲ್ಲಿ ಕೊಠಡಿಗಳ ನಿರ್ಮಾಣಕ್ಕೆ ಚಾಲನೆ ನೀಡಿದ್ದಾರೆ. ಶೀಘ್ರ ಕಾಮಗಾರಿ ಪೂರ್ಣಗೊಂಡು ಸಮಸ್ಯೆಗೆ ಪರಿಹಾರ ದೊರೆಯಲಿದೆ ಎಂದು ಹೇಳಿದರು.

ಶಿಕ್ಷಣ ಇಲಾಖೆ ನಿವೃತ್ತ ಅಧಿಕಾರ ಬಿ.ಆರ್.ಶಿವಕುಮಾರ್ ಮಾತನಾಡಿ, ಓದು ಸಹಜವಾಗಿರಬಾರದು. ಓದಿದ್ದನ್ನು ಸದಾ ಮನನ ಮಾಡಿಕೊಳ್ಳಬೇಕು. ಕಲಿಕೆ ಹೇಗಿರಬೇಕು, ನೆನಪಿನ ಶಕ್ತಿ ವೃದ್ಧಿಸಿಕೊಳ್ಳುವುದು ಹೇಗೆ ಎಂಬ ವಿಷಯ ತಿಳಿದಿರಬೇಕು. ಆಗ ಮಾತ್ರ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ ಎಂದರು.ಸಾಹಿತಿ ಪ್ರೊ.ಎಂ.ಜಿ.ರಂಗಸ್ವಾಮಿ, ಎನ್.ನರಸಿಂಹಮೂರ್ತಿ, ಪುಟ್ಟಮಕ್ಕ, ಸಂತೋಷ್, ದೊಡ್ಡಯ್ಯ, ಬಿ.ಎಂ. ಗುರುನಾಥ್, ಚನ್ನಬಸಪ್ಪ, ಡಾ.ಹೇಮಂತರಾಜ್, ಈ.ಮಹೇಶಬಾಬು ಇತರರಿದ್ದರು.

## ಫಾಸ್ಟ್ ನ್ಯೂಸ್

### ಪೊಲೀಸ್ ಪಬ್ಲಿಕ್ ಶಾಲೆಯ ಪ್ರವೇಶ ಪ್ರಕ್ರಿಯೆ ಆರಂಭ

» **ದಾವಣಗೆರೆ**

ಕರ್ನಾಟಕ ಸ್ಟೇಟ್ ಪೊಲೀಸ್ ವೆಲ್‌ಫೇರ್ ಅಂಡ್ ಎಜುಕೇಶನ್ ಟ್ರಸ್ಟ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಪಬ್ಲಿಕ್ ಶಾಲೆಯ ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿರುತ್ತದೆ. ಶಾಲೆಯು ಸಿಬಿಎಸ್‌ಇ(ಕೇಂದ್ರೀಯ) ಪಠ್ಯಕ್ರಮಕ್ಕೆ ಹೊಂದಿಕೊಂಡಂತೆ ಸಿಬಿಎಸ್‌ಸಿ ಮಾನ್ಯತೆಯನ್ನು ಪಡೆದಿದೆ. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಪಠ್ಯಕ್ರಮದೊಂದಿಗೆ ಚಟುವಟಿಕೆಯಾಧಾರಿತ ಶಿಕ್ಷಣವನ್ನು ನೀಡುತ್ತಿದೆ. ಮುಂದಿನ ಸಾಲಿನ ಪ್ರಸಕ್ತ ಶೈಕ್ಷಣಿಕ ವರ್ಷದ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದ್ದು ಆಸಕ್ತಿಯುಳ್ಳ ಪೋಷಕರು ಶಾಲೆಯ ವೆಬ್‌ಸೈಟ್‌ನಲ್ಲಿ ತಮ್ಮ ಮಕ್ಕಳ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಶಾಲೆಯ ಪ್ರವೇಶಕ್ಕೆ ಪರೀಕ್ಷೆಯನ್ನು ಫೆಬ್ರವರಿ 22 ಮತ್ತು 23 ರಂದು ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ppsdavanagere.karnataka.gov.in ವೆಬ್‌ಸೈಟ್ ಹಾಗೂ ದೂ.ಸಂ: 9164633833, 8277981961 ಸಂಪರ್ಕಿಸಲು ಶಾಲೆಯ ಕಾರ್ಯದರ್ಶಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

### ಇಂಧನ ಸಚಿವರ ಜಿಲ್ಲಾ ಪ್ರವಾಸ

» **ದಾವಣಗೆರೆ**

ಮಾನ್ಯ ಇಂಧನ ಸಚಿವರು ಹಾಗೂ ಚಿಕ್ಕಮಂಗಳೂರು ಜಿಲ್ಲಾ ಉಸ್ತುವಾರಿ ಸಚಿವರಾಧ ಕೆ.ಜೆ ಜಾರ್ಜ್ ಅವರು ಫೆಬ್ರವರಿ 18 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಫೆಬ್ರವರಿ 18 ರಂದು ದಾವಣಗೆರೆ ಆಗಮಿಸಿ ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ನಂತರ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿರುವ ಇಂಧನ ಇಲಾಖೆಯ ವಿಷಯಗಳ ಕುರಿತು ಚರ್ಚಿಸಲು ಜಿಲ್ಲೆಯ ಎಲ್ಲಾ ಚುನಾಯಿತ ಜನ ಪ್ರತಿನಿಧಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 1.30 ಕ್ಕೆ ದಾವಣಗೆರೆಯಿಂದ ತೆರಳುವರು.

### ವಾಹನ ಸಂಚಾರ ಗಣತಿ

» **ದಾವಣಗೆರೆ**

ಲೋಕೋಪಯೋಗಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ರಸ್ತೆ ಸಂಚಾರ ಸಮೀಕ್ಷೆಯನ್ನು ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಆಯ್ದ 139 ಸ್ಥಳಗಳಲ್ಲಿ ಫೆಬ್ರವರಿ 17 ರ ಬೆಳಿಗ್ಗೆ 6 ರಿಂದ ಫೆ.24 ರ ಬೆಳಿಗ್ಗೆ 6 ಗಂಟೆಯವರೆಗೆ ಸತತವಾಗಿ 7 ದಿನಗಳ ಕಾಲ ಸಿ.ಸಿ ಕ್ಯಾಮರ ಮುಖಾಂತರ ವಾಹನ ಸಂಚಾರ ಗಣತಿಯನ್ನು ನಡೆಸಲಾಗುವುದು. ಈ ಗಣತಿ ಕಾರ್ಯದಿಂದ ರಸ್ತೆಯಲ್ಲಿನ ವಾಹನ ದಟ್ಟಣೆ ಅರಿಯಲು ಹಾಗೂ ಇರುವ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು, ಅಗಲೀಕರಣ, ವಾಹನಗಳ ಸಂಚಾರ ಸುಗಮಗೊಳಿಸಲು, ಸಂಚಾರದಲ್ಲಿ ಸುರಕ್ಷತೆ ಉತ್ತಮಪಡಿಸಲು, ಅಪಘಾತ ತಡೆಯಲು ಗಣತಿಯಿಂದ ಸಹಕಾರಿಯಾಗಲಿದೆ. ವಾಹನ ಸವಾರರು ಗಣತಿಗೆ ಸಹಕರಿಸಲು ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ವಿದ್ಯಾರ್ಥಿಗಳ ಶೈಕ್ಷಣಿಕ ಮಟ್ಟ ಹೆಚ್ಚಳಕ್ಕೆ ಕಲಿಕಾಹಬ್ಬ ಹೆಚ್ಚು ಸಹಕಾರಿ; ಮಾರಣ್ಣ



» **ಚಳ್ಳಕೆರೆ**

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕಲಿಕಾಹಬ್ಬ ಹೆಚ್ಚು ಸಹಕಾರಿ. ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಲು ಮತ್ತು ಹೊಸ, ಹೊಸ ವಿಷಯಗಳ ಕಲಿಕೆಗೆ ಶಿಕ್ಷಕರು ವಿದ್ಯಾರ್ಥಿಗಳನ್ನು ಪ್ರೇರೇಪಿಸಬೇಕು ಎಂದು ಸಿಆರ್ ಸಿ ಎನ್.ಮಾರಣ್ಣ ಹೇಳಿದರು. ಅವರು, ತಾಲ್ಲೂಕಿನ ಹಿರೇಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದರು. ಕ್ಲಸ್ಟರ್ ವ್ಯಾಪ್ತಿಯ 9 ಶಾಲೆಗಳ200ಕ್ಕೂ ಹೆಚ್ಚು 1ರಿಂದ5ನೇ ತರಗತಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದಾರೆ. ಗಟ್ಟಿಓದು, ಕಥೆಹೇಳುವುದು, ಕೈಬರವಣಿಗೆ, ಸಂತೋಷದಾಯಕಗಣಿತ, ಮೆಮೊರಿಪರೀಕ್ಷೆ, ರಸಪ್ರಶ್ನೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿದ್ದಾರೆ. ವಿಜೇತ ಮಕ್ಕಳಿಗೆ ಬಹುಮಾನವನ್ನು ನೀಡಲಾಗಿದೆ ಎಂದರು.ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಓ.ರವಿ ಮಾತನಾಡಿ, ಶಿಕ್ಷಣ ಇಲಾಖೆ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ದೃಷ್ಟಿಯಿಂದ ಹಲವಾರು ಕಾರ್ಯಕ್ರಮಗಳನ್ನು ಜಾರಿ ಮಾಡುವ ಮೂಲಕ ಬೋಧನಾ ಮಟ್ಟವನ್ನು ಹೆಚ್ಚಿಸುವ ಕೆಲಸ ಮಾಡುತ್ತಿರುವುದು ಸ್ವಾಗತಾರ್ಹ. ಪರೀಕ್ಷಾ ಸಮಯದಲ್ಲಿ ಮಕ್ಕಳಿಗೆ ಗೊಂದಲ ನಿವಾರಣೆ, ಕಲಿಕಾ ಮಟ್ಟ ಹೆಚ್ಚಳ ಮಾಡುವ ಕೆಲಸ ಮತ್ತಷ್ಟು ಆಗಬೇಕಿದೆ ಎಂದರು.ಹಿರೇಹಳ್ಳಿ ಪಿಡಿಓ ನರಸಿಂಹಪ್ಪ, ಶಿಕ್ಷಕರಾದ ಮಾರುತೇಶ್, ಕೇಶವಮೂರ್ತಿ ಉಪಸ್ಥಿತರಿದ್ದರು.

# ನಗರ ಕೇಂದ್ರ ಗ್ರಂಥಾಲಯ, ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಜಿ.ಪಂ ಸಿಇಓ ದಿಢೀರ್ ಭೇಟಿ

» **ಚಿತ್ರದುರ್ಗ**

ನಗರದ ಹೃದಯ ಭಾಗದಲ್ಲಿರುವ ನಗರ ಕೇಂದ್ರ ಗ್ರಂಥಾಲಯಕ್ಕೆ ಹಾಗೂ ನಗರದ ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಜಿಲ್ಲಾ ಪಂಚಾಯಿತಿ ಸಿಇಓ ಎಸ್. ಜೆ.ಸೋಮಶೇಖರ್ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಗ್ರಂಥಾಲಯದಲ್ಲಿನ ವಾಚನಾಲಯ, ನಿಯತಕಾಲಿಕೆಗಳ ಕೊಠಡಿ ಸೇರಿದಂತೆ ವಿವಿಧೆಡೆ ಭೇಟಿ ನೀಡಿ, ಓದುಗರು ಹಾಗೂ ಸ್ಪರ್ಧಾಕಾಂಕ್ಷಿಗಳೊಂದಿಗೆ ಮುಕ್ತವಾಗಿ ಮಾತನಾಡಿ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಸ್ಪರ್ಧಾಕಾಂಕ್ಷಿಗಳು ಹಾಗೂ ವಿದ್ಯಾರ್ಥಿಗಳು ಈ ಗ್ರಂಥಾಲಯ ಉಪಯೋಗಿಸಿಕೊಂಡು ಉತ್ತಮ ಅಂಕ ಪಡೆಯುವುದರ ಜೊತೆಗೆ, ಉನ್ನತ ಹುದ್ದೆ ಅಲಂಕರಿಸುವಂತಾಗಬೇಕು ಎಂದು ತಿಳಿಸಿ, ತಮ್ಮ ವಿದ್ಯಾರ್ಥಿ ಜೀವನದ ಅನುಭವ ಹಂಚಿಕೊಂಡರು.

ಜಿಲ್ಲಾ ಮತ್ತು ನಗರ ಗ್ರಂಥಾಲಯಗಳಿಗೆ ಅನುದಾನ ಬಿಡುಗಡೆಯಾಗಿದ್ದು, ಈ ಅನುದಾನದಲ್ಲಿ ಅತೀ ಶೀಘ್ರದಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ನಗರ ಕೇಂದ್ರ ಮುಖ್ಯ ಗ್ರಂಥಾಧಿಕಾರಿ ಕೊಳ್ಳಿ





ಬಸವರಾಜ್ ಮಾಹಿತಿ ನೀಡಿದರು.

ಗ್ರಂಥಾಲಯದ ಅವರಣದೊಳಗೆ ಕಾಮಗಾರಿಗಳ ಅನುಷ್ಟಾನ ಮಾಡುವ ಸ್ಥಳ ಪರಿಶೀಲಿಸಿದ ಜಿಲ್ಲಾ ಪಂಚಾಯಿತಿ ಸಿಇಓ ಅವರು, ಬಿಡುಗಡೆಗೊಂಡಿರುವ ಅನುದಾನವನ್ನು ನಿಯಮಾನುಸಾರ ಖರ್ಚು ಮಾಡಿ, ಕಾಮಗಾರಿಗಳ ಗುಣಮಟ್ಟ ಕಾಪಾಡಿಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಗ್ರಂಥಾಲಯಗಳನ್ನು ನಿರ್ಮಾಣ ಮಾಡಬೇಕೆಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯ ಅಧಿಕಾರಿಗೆ ಸೂಚಿಸಿದರು. ನಂತರ ಶೌಚಾಲಯಕ್ಕೆ ಭೇಟಿ ನೀಡಿ, ವಿಶೇಷ ಚೇತನರು ಶೌಚಾಲಯ ಬಳಸಲು ಮತ್ತು ಹೋಗಿ ಬರಲು ಜಾಗವನ್ನು ಮಾಡಿಕೊಡಿ ಎಂದು ಸಲಹೆ ನೀಡಿದರು. ಅದೇ ರೀತಿಯಾಗಿ ಬ್ರೈಲ್ ಪುಸ್ತಕಗಳು ಮತ್ತು ಉಪಕರಣಗಳಗಳ ಬಗ್ಗೆ ಮಾಹಿತಿ ಪಡೆದರು.

ವಿದ್ಯಾರ್ಥಿ ನಿಲಯ ಪರಿಶೀಲನೆ: ಚಿತ್ರದುರ್ಗ ನಗರದ ಮೆದೇಹಳ್ಳಿ, ತಮಟಕಲ್ಲು ರಸ್ತೆಯಲ್ಲಿರುವ ಡಿ. ದೇವರಾಜು ಅರಸು ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಜಿ.ಪಂ ಸಿಇಓ ಭೇಟಿ ನೀಡಿ ಪರಿಶೀಲಿಸಿದರು.ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ನಿಲಯ ಪಾಲಕರೊಂದಿಗೆ ಕುಂದು ಕೊರತೆ ಆಲಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಈ ವಿದ್ಯಾರ್ಥಿ ನಿಲಯಕ್ಕೆ ಉತ್ತಮವಾದ ಗ್ರಂಥಾಲಯಬೇಕೆಂದು ಮನವಿ ಮಾಡಿಕೊಂಡರು.

ಅಲ್ಲೇ ವಿದ್ಯಾರ್ಥಿಗಳೊಂದಿಗೆ ಮಧ್ಯಾಹ್ನದ ಭೋಜನ ಸವಿದರು.ನಂತರ ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿ ಅವಲೋಕಿಸಿ ಮಾಹಿತಿ ಪಡೆದರು. ಅಲ್ಲಿನ ಹಾಸ್ಟೆಲ್ ವಾರ್ಡನ್ ಮತ್ತು ವಿದ್ಯಾರ್ಥಿನಿಯರೊಂದಿಗೆ ಕುಂದು-ಕೊರತೆಗಳ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುಬ್ರನಾಯಕ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ್, ನಗರ ಕೇಂದ್ರ ಗ್ರಂಥಾಲಯ ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ್ ಸೇರಿದಂತೆ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳು ಹಾಗೂ ನಿಲಯ ಪಾಲಕರು ಇದ್ದರು.

## ಮಕ್ಕಳು ಪುಸ್ತಕಗಳನ್ನು ಪ್ರೀತಿಸಬೇಕು: ಡಾ.ಗುರುನಾಥ

» **ಚಿತ್ರದುರ್ಗ**

ಮಕ್ಕಳು ಪುಸ್ತಕಗಳನ್ನು ಪ್ರೀತಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಹಾಗೂ ಜಿಲ್ಲಾ ಬಾಲಭವನ ಸಮಿತಿ ಸದಸ್ಯ ಡಾ.ಬಿ.ಎಂ.ಗುರುನಾಥ್ ಹೇಳಿದರು.

ನಗರದ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ರಾಜ್ಯ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶ್ರೀ ಸಂಪಿಗೆ ಸಾಂಸ್ಕೃತಿಕ ಸಾಮಾಜಿಕ ಶೈಕ್ಷಣಿಕ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 6 ರಿಂದ 16 ವರ್ಷದೊಳಗಿನ ಮಕ್ಕಳ ವಾರಾಂತ್ಯ ಚಟುವಟಿಕೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪರೀಕ್ಷೆಗಳನ್ನು ಕ್ರಿಯಾಶೀಲವಾಗಿ ಬರೆಯಬೇಕಾದರೆ ಆತ್ಮಸ್ಥೈರ್ಯ, ಶ್ರಮ ಬಹಳ ಮುಖ್ಯ. ಒಳ್ಳೆಯ ವಿಚಾರಗಳನ್ನು ಇಟ್ಟುಕೊಂಡು ದ್ವೇಷ ಅಸೂಯೆ ತೊಡೆದು ಹಾಕಬೇಕು. ಆಧುನಿಕ ಜೀವನ ಶೈಲಿ ಮತ್ತು ವಾಣಿಜ್ಯೀಕರಣದಿಂದ ಸಂಬಂಧಗಳು ಬಿರುಕು ಮೂಡುತ್ತಿವೆ. ಕುಟುಂಬ ವ್ಯವಸ್ಥೆಯಲ್ಲಿನಮ್ಮಜೊತೆಹಿರಿಯರು ಇಲ್ಲದಿರುವುದು ಮಾರ್ಗದರ್ಶನದ ಕೊರತೆಯಾಗಿದೆ. ಶಿಕ್ಷಣದೊಂದಿಗೆ ಬದುಕು ಕಟ್ಟಿಕೊಳ್ಳುವುದು ಮಕ್ಕಳ ಬಹುದೊಡ್ಡ ಜವಾಬ್ದಾರಿಯಾಗಿದೆ ಎಂದರು.ಬಾಲಕಿಯರ ಸರ್ಕಾರಿ



ಪದವಿಪೂರ್ವ ಕಾಲೇಜು ಉಪ ಪ್ರಾಂಶುಪಾಲಕರಿಯಪ್ಪಮಾತನಾಡಿ ಸರ್ಕಾರಿ ಶಾಲೆ ಮಕ್ಕಳಿಗೆ ಎಲ್ಲ ಸೌಲಭ್ಯಗಳು ಸಿಕ್ಕಿವೆ. ಸೌಲಭ್ಯಗಳನ್ನು ಬಳಸಿಕೊಂಡು ವಿನಯ ಮತ್ತು ಕ್ರಿಯಾಶೀಲತೆಯಿಂದ ಬದುಕು ಕಟ್ಟಿಕೊಳ್ಳಬೇಕು. ವಿದ್ಯಾರ್ಥಿಗಳು ಸೋಮಾರಿಗಳಾಗದೆ ಓದಿನ ಕಡೆ ಹೆಚ್ಚು ಆಸಕ್ತಿವಹಿಸಿ, ಪಠ್ಯಕ್ಕೆ ಪೂರಕವಾದ ಚಟುವಟಿಕೆಗಳನ್ನು ಅಳವಡಿಸಿಕೊಂಡು ಯಶಸ್ವಿಯಾಗಬೇಕೆಂದು ಹಾರೈಸಿದರು.

ಜಿಲ್ಲಾ ಬಾಲ ಭವನ ಕಾರ್ಯಕ್ರಮ ಸಂಯೋಜಕ ಡಿ.ಶ್ರೀಕುಮಾರ್ ಮಾತನಾಡಿ, ಮಕ್ಕಳು ಕನಸುಗಳನ್ನು ಕಾಣಬೇಕು. ಕನಸುಗಳನ್ನು ನನಸಾಗುವ ನಿಟ್ಟಿನಲ್ಲಿ ಪಠ್ಯೇತರ ಚಟುವಟಿಕೆಗಳ ಜೊತೆಗೆ ಸೃಜನಶೀಲತೆಯೊಂದಿಗೆ ವಿದ್ಯಾಭ್ಯಾಸ ಮಾಡಬೇಕು. ಈ ನಿಟ್ಟಿನಲ್ಲಿ ರಾಜ್ಯಬಾಲ ಭವನದ ಅಧ್ಯಕ್ಷರಾದ ಬಿ.ಆರ್ ನಾಯ್ಡು ಅವರ ಮಾರ್ಗದರ್ಶನದಂತೆ ರಾಜ್ಯಾದ್ಯಂತ ವಾರಂತ್ಯದಲ್ಲಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡಿದ್ದೇವೆ ಎಂದರು. ಇದೇ ಸಂದರ್ಭದಲ್ಲಿ ಆಶು ಭಾಷಣ ಸ್ಪರ್ಧೆ, ಗಾಯನ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಮಾಣ ಪತ್ರ ನೀಡಲಾಯಿತು. ಶಿಕ್ಷಕ ಕಲ್ಲೇಶ್ ಡಿ ಮೌರ್ಯ ಕಾರ್ಯಕ್ರಮ ನಿರೂಪಿಸಿದರು.

## ಐದು ಕೇಂದ್ರಗಳಲ್ಲಿ ವಿವಿಧ ವಸತಿ ಶಾಲೆಗಳ ಪ್ರವೇಶಪರೀಕ್ಷೆ ಸೂಸುತ್ರ



» **ಚಳ್ಳಕೆರೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಡೆದ ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ ನಗರದ 5 ಕೇಂದ್ರಗಳಲ್ಲಿ ಸೂಸುತ್ರವಾಗಿ ಶನಿವಾರ ನಡೆಯಿತು. ಸರ್ಕಾರಿ ಪದವಿಪೂರ್ವಕಾಲೇಜು, ಬಾಪೂಜಿಪದವಿಪೂರ್ವಕಾಲೇಜು, ವಾಸವಿ, ಎಸ್‌ಆರ್‌ಎಸ್ ಪಿಯುಕಾಲೇಜು, ಬಿಎಂಜಿಎಚ್‌ಎಸ್ ಪ್ರೌಢಶಾಲೆಯಲ್ಲಿ ಪರೀಕ್ಷೆ ನಡೆದವು. ತಾಲ್ಲೂಕು ಸೇರಿದಂತೆ ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು ಆಗಮಿಸಿ ಪರೀಕ್ಷೆ ಬರೆದರು. ಒಟ್ಟು 1919 ವಿದ್ಯಾರ್ಥಿಗಳು ಪರೀಕ್ಷೆ ತಗೆದುಕೊಂಡಿದ್ದು, 17 ವಿದ್ಯಾರ್ಥಿಗಳು ಗೈರಾಗಿದ್ದು, 1902 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು ಪಿಯು ಡಿಡಿ ಪುಟ್ಟಸ್ವಾಮಿ ತಿಳಿಸಿದರು. ಮೊರಾರ್ಜಿದೇಸಾಯಿವಸತಿಶಾಲೆ, ಕಿತ್ತೂರರಾಣಿಚನ್ನಮ್ಮವಸತಿಶಾಲೆ, ಅಟಲ್‌ಬಿಹಾರಿವಾಯಿಪೇಯಿವಸತಿಶಾಲೆ,ಶ್ರೀಮತಿಇಂದಿರಾಗಾಂಧಿವಸತಿ, ಏಕಲವ್ಯವಸತಿಶಾಲೆ, ಡಾ.ಬಿಆರ್. ಅಂಬೇಡ್ಕರ್‌ವಸತಿಶಾಲೆ, ಸಂಗೋಳಿರಾಯಣ್ಣವಸತಿ ಶಾಲೆಯೂ ಒಟ್ಟು 12ಕ್ಕೂ ಹೆಚ್ಚು ವಸತಿ ಶಾಲೆಗಳ ಪ್ರವೇಶಕ್ಕೆ ವಿದ್ಯಾರ್ಥಿಗಳು ಉತ್ಸಾಹದಿಂದಲೇ ಪರೀಕ್ಷೆ ಬರೆದಿದ್ದು ಕಂಡುಬಂತು.

## ಪ್ರಮುಖ ಸುದ್ದಿ

### ನೀರಿನ ಸಮರ್ಥ ಬಳಕೆ ಹಾಗೂ ಸೇವಂತಿಗೆ ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ಕುರಿತು ತರಬೇತಿ

# ಸಮಗ್ರ ಕೃಷಿ ಪದ್ದತಿ ಅಳವಡಿಕೆಗೆ ಸಲಹೆ: ರಜನೀಕಾಂತ

» **ಚಿತ್ರದುರ್ಗ**

ರೈತರು ಕೃಷಿಯ ಜೊತೆಗೆ ಕೃಷಿ ಉಪ ಕಸುಬುಗಳಾದ ಹೈನುಗಾರಿಕೆ, ಕುರಿ ಸಾಕಣಿಕೆ, ಕೋಳಿ ಮತ್ತು ಜೇನು ಸಾಕಾಣಿಕೆ ಮಾಡಿ ಸಮಗ್ರ ಕೃಷಿ ಪದ್ಧತಿ ಅಳವಡಿಸುವುದರಿಂದ ಸುಸ್ಥಿರ ಕೃಷಿಯಿಂದ ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಹೊಸದುರ್ಗ ಮತ್ತು ಹಿರಿಯೂರು ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿಯಲ್ಲಿ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆ, ಸೇವಂತಿಗೆ ಬೆಳೆಯ ಸುಧಾರಿತ ಬೇಸಾಯ ಕ್ರಮಗಳು, ಸಮಗ್ರರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಆಯೋಜಿಸಲಾದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಚಿತ್ರದುರ್ಗ ಜಿಲ್ಲೆಯು ಅತಿ ಹೆಚ್ಚು ಅಂತರ್ಜಲ ಉಪಯೋಗಿಸುವ ಜಿಲ್ಲೆಯಲ್ಲಿ ಒಂದಾಗಿದ್ದು, ಮುಂದಿನ ಪೀಳಿಗೆಗೆ ಶುದ್ಧ ನೀರನ್ನು ಉಳಿಸಲು ಹನಿ ಮತ್ತು ತುಂತುರು ನೀರಾವರಿ ಘಟಕಗಳ



ಬಳಕೆಯಿಂದ ನೀರಿನ ಸಮರ್ಥ ಮತ್ತು ಮಿತ ಬಳಕೆಗೆ ಸಹಕಾರಿಯಾಗಿದೆ. ಸೇವಂತಿಗೆ ಜಿಲ್ಲೆಯ ಪ್ರಮುಖ ಹೂವಿನ ಬೆಳೆಯಾಗಿದ್ದು, ಈ ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ತಾಂತ್ರಿಕತೆಗಳ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದರು.

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅಡಿ ರೈತರು ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ರೈತ ಸಂಪರ್ಕಕೇಂದ್ರವನ್ನು ಸಂಪರ್ಕಿಸಿ ತುಂತುರು ನೀರಾವರಿ ಘಟಕಗಳನ್ನು ಪಡೆಯಬಹುದಾಗಿದೆ. ಒಮ್ಮೆ ಸೂಕ್ಷ್ಮ ನೀರಾವರಿ ಪದ್ಧತಿಗೆ ಸಹಾಯಧನ ಪಡೆದ ಸಾಮಾನ್ಯ ವರ್ಗದ ರೈತರಿಗೆ ಮತ್ತೊಮ್ಮೆ ಸಹಾಯಧನ ಪಡೆಯಲು ಅವಕಾಶವಿರುವುದಿಲ್ಲ. ಆದರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡರೈತರಿಗೆ ಪ್ರತಿ ಏಳು ವರ್ಷಕ್ಕೊಮ್ಮೆ ಸೂಕ್ಷ್ಮ ನೀರಾವರಿ ಘಟಕಗಳನ್ನು ಸಹಾಯಧನದಲ್ಲಿ ನೀಡಲು ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಲು ಕೋರಿದರು.

ಜೈನ್‌ಇರಿಗೇಷನ್ ಸಂಸ್ಥೆಯ ಪ್ರತಿನಿಧಿಯಾದ ಕೆ.ದೇವರಾಜ್ ಕೃಷಿ ಹಾಗೂ ತೋಟಗಾರಿಕಾ ಬೆಳಗಳಲ್ಲಿ ನೀರಿನ ಮಿತ ಬಳಕೆ ಹಾಗೂ ಉತ್ಪಾದಕತೆ ಹೆಚ್ಚಿಸಲು ಸ್ಪ್ರಿಂಕ್ಲರ್ ಮತ್ತು ಹನಿ ನೀರಾವರಿ ತಾಂತ್ರಿಕತೆ, ರಸಾವರಿ ತಂತ್ರಜ್ಞಾನ ಮತ್ತು ಅವುಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡಿದರು.

ಚಿತ್ರದುರ್ಗ ತಾಲ್ಲೂಕಿನ ಹುಣಸೆಕಟ್ಟೆ ಗ್ರಾಮದ ಪ್ರಗತಿಪರ ರೈತರಾದ ಪಿ.ಸಿ.ಶ್ರೀನಿವಾಸ್ ಅವರು ಕಳೆದ 15 ವರ್ಷಗಳಿಂದ ಸೇವಂತಿಗೆ ಬೆಳೆಯನ್ನು ಬೆಳೆಯುತ್ತಿದ್ದು, ಹೆಚ್ಚಿನ ಇಳುವರಿ ಪಡೆಯಲು ಉತ್ತಮ ಆರೋಗ್ಯಕರ ಸಸಿಗಳ ನಾಟಿ ಮಾಡುವುದು ಪ್ರಮುಖವಾಗಿದ್ದು, ಪ್ರಾರಂಭಿಕ ಹಂತದ ರೋಗಗಳನ್ನು ನಿರ್ವಹಿಸಲು ಸಸಿ ಹಂತದಲ್ಲಿ ಕಾರ್ಬನ್‌ಡೈಜಿಮ್ + ಮ್ಯಾಂಕೊಜೆಬ್ ಸಿಂಪರಣೆ ಮಾಡುವುದು ಸೂಕ್ತ ಎಂದರು.

ಬಬ್ಬೂರಿನ ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಗುರುದೇವಿ ಅವರು ಸೇವಂತಿಗೆ ಬೆಳೆಯಲ್ಲಿ ಬರುವ ರೋಗಗಳ ನಿರ್ವಹಣೆ ಮತ್ತು ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದ ಕೀಟಶಾಸ್ತ್ರಜ್ಞರಾದ ಡಾ.ಓಂಕಾರಪ್ಪರವರು ಸೇವಂತಿಗೆ ಬೆಳೆಯಲ್ಲಿ ಕೀಟಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡಿದರು.

ಇಫ್ಕೋ ಸಂಸ್ಥೆಯ ಕ್ಷೇತ್ರ ಅಧಿಕಾರಿಯಾದ ಚಿದಂಬರಮೂರ್ತಿ ಅವರು ನ್ಯಾನೋಯುರಿಯಾ ಮತ್ತು ನ್ಯಾನೋ ಡಿಎಪಿಯ ಕುರಿತು ಮಾಹಿತಿ ನೀಡಿದರು.

## ಫಾಸ್ಟ್ ನ್ಯೂಸ್

### ಅಗ್ನಿಅವಘಡಗಳನ್ನು ನಿಯಂತ್ರಿಸಲು ಎಲ್ಲರ ಸಹಕಾರವೇ ಮುಖ್ಯ: ಅಧಿಕಾರಿ ತಿಪ್ಪೇಶ್



» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಚಳ್ಳಕೆರೆ ನಗರವೂ ಸೇರಿದಂತೆ ವಿವಿಧೆಡೆ ಅಗ್ನಿದುರಂತಗಳ ಸರಮಾಲೆ ಸೃಷ್ಠಿಯಾಗಿದೆ. ಬಿಸಿಲಿನ ಕೆನ್ನಾಲಿಗೆ ಎಲ್ಲೆಡೆ ಹರಡಿ ಅನೇಕ ರೀತಿಯ ಅವಘಡಗಳನ್ನು ಸೃಷ್ಠಿಸುತ್ತಿದೆ. ಅಗ್ನಿ ಅವಘಡಗಳನ್ನು ನಿಯಂತ್ರಿಸಿಲು ಎಲ್ಲರೂ ಮುಂದಾಗಬೇಕೆಂದು ಅಗ್ನಿಶಾಮಕ ಠಾಣಾಪ್ರಮುಖ ಅಧಿಕಾರಿ ತಿಪ್ಪೇಶ್ ತಿಳಿಸಿದರು. ಅವರು, ನಗರದ ಬಸವೇಶ್ವರ ಆಂಗ್ಲಮಾದ್ಯಮಿಕಶಾಲೆಯಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಅಗ್ನಿಅವಘಡಗಳನ್ನು ನಿಯಂತ್ರಿಸುವ ಕುರಿತು ಏರ್ಪಡಿಸಿದ್ದ ಪ್ರಾತ್ಯಕ್ಷತೆಯನ್ನು ಉದ್ಘಾಟಿಸಿ ಮಾತನಾಡಿದರು. ಬೆಂಕಿ ಆಕಸ್ಮಿಕ ಸಂದರ್ಭದಲ್ಲಿ ಮುಂದಾಲೋಚನೆ ಬಹಳಮುಖ್ಯವಾಗಿದೆ. ಅಗ್ನಿ ಪ್ರಕರಣಗಳಲ್ಲಿ ಪ್ರತಿಯೊಬ್ಬ ನಾಗರೀಕರೂ ಕೂಡಲೇ ಅಗ್ನಿಶಾಮಕ ಠಾಣೆ ಹಾಗೂ ಪೊಲೀಸರಿಗೆ ಮಾಹಿತಿ ನೀಡಬೇಕು. ನಿಮ್ಮಲ್ಲಿ ಲಭ್ಯವಿರುವ ನೀರು, ಇನ್ನಿತರ ವಸ್ತುಗಳಿಂದ ಅಗ್ನಿ ನಂದಿಸಲು ಪ್ರಯತ್ನಿಸಬೇಕು, ಆಕಸ್ಮಿಕವಾಗಿ ಸಂಭವಿಸುವ ಅನಾಹುತಗಳ ಬಗ್ಗೆ ಎಚ್ಚರಿಕೆ ಮೂಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಗ್ನಿಅವಘಡ ನಿಯಂತ್ರಣ ಎಲ್ಲರ ಕರ್ತವ್ಯವಾಗಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ವಿ.ಮಂಜುನಾಥ ವಹಿಸಿದ್ದರು, ಕಾರ್ಯದರ್ಶಿ ಕೋಟೆಜಯಣ್ಣ, ನಿರ್ದೇಶಕರಾದ ವಿಜಯ್, ಮುಖ್ಯ ಶಿಕ್ಷಕಿ ಎಂ.ಮಧುರ, ಬಿ.ಶ್ರೀನಿವಾಸ್, ಅಗ್ನಿಶಾಮಕ ಅಧಿಕಾರಿಗಳಾದ ಕುಮಾರಸ್ವಾಮಿ, ಕೊಂಡಜ್ಜಿ, ಬಸವನಗೌಡ, ಜಬೀವುಲ್ಲಾ ಮುಂತಾದವರು ಭಾಗವಹಿಸಿದ್ದರು.

### ಶ್ರೀದುರ್ಗಾಂಭಿಕೆ ದೇವಿಯ ನೂತನ ದೇವಸ್ಥಾನ ಉದ್ಘಾಟನೆ ಮತ್ತು ವಿಗ್ರಹ ಪ್ರತಿಷ್ಠಾಪನೆ



» **ಚಳ್ಳಕೆರೆ**

ದಲಿತ ಸಮುದಾಯ ತಮ್ಮ ಆರಾಧನೆಯ ದೇವರ ಗುಡಿ ಗೋಪುರ ಕಟ್ಟಿಕೊಂಡಂತೆ ಬದುಕನ್ನು ಸದೃಢಗೊಳಿಸುವ ಸಾಮಾಜಿಕ ಚಿಂತನೆ ಮತ್ತು ಶಿಕ್ಷಣದಲ್ಲಿ ಪ್ರಗತಿ ಕಂಡುಕೊಳ್ಳಬೇಕು ಎಂದು ಕೋಡಿಹಳ್ಳಿ ಆದಿ ಜಾಂಭವ ಮಹಾಸಂಸ್ಥಾನ ಮಠದ ಶ್ರೀಷಡಾಕ್ಷರ ದೇಶಿಕೇಂದ್ರ ಸ್ವಾಮೀಜಿ ಹೇಳಿದರು. ಚಳ್ಳಕೆರೆ ತಾಲೂಕಿನ ಕೊರ್ಲಕುಂಟೆ ಗ್ರಾಮದಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಶ್ರೀದುರ್ಗಾಂಭಿಕೆ ದೇವಿಯ ನೂತನ ದೇವಸ್ಥಾನ ಉದ್ಘಾಟನೆ ಮತ್ತು ವಿಗ್ರಹ ಪ್ರತಿಷ್ಠಾಪನೆ, ಕಳಸಾರೋಹಣ ಮಹೋತ್ಸವದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಶಾಸಕ ಟಿ. ರಘುಮೂರ್ತಿ ಮಾತನಾಡಿ, ಹಳ್ಳಿಗಳಲ್ಲಿ ಈಗಲೂ ಜಾತ್ರೆ, ಹಬ್ಬ ಆಚರಣೆಗಳಲ್ಲಿ ಸಾಮಾಜಿಕ ಸಂಬಂಧಗಳು ಕಾಣುತ್ತೇವೆ. ಎಲ್ಲಾ ವರ್ಗದವರ ಸಹಕಾರದಲ್ಲಿ ನೆರವೇರುವ ದೇವತಾ ಕಾರ್ಯಗಳು ಸಮಾಜಮುಖಿಯಾಗಿ ಇರಬೇಕು. ನಗರ ಪ್ರದೇಶದಲ್ಲಿ ಸಂಬಂಧಗಳು ಭಿನ್ನವಾಗಿ ಕಾಣುತ್ತೇವೆ. ಆದರೆ, ಹಳ್ಳಿಗಳಲ್ಲಿ ರಕ್ತ ಸಂಬಂಧಿಗಳಂತೆ ಒಗ್ಗಟ್ಟು ಸಂಬಂಧ ಇರುತ್ತದೆ. ಹಿರಿಯರ ಪದ್ದತಿ ಆಚರಣೆಗಳಲ್ಲಿ ಯಾವುದೇ ತಾರತಮ್ಯ ಮಾಡದಂತೆ ಸಮಾನತೆ ಇರಬೇಕು. ಕ್ಷೇತ್ರದ ಪ್ರತಿ ಹಳ್ಳಿಗಳ ಅಗತ್ಯ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಅದರಲ್ಲಿ ಶಿಕ್ಷಣ ಪ್ರಗತಿಗೆ ಮೊದಲ ಆದ್ಯತೆಯಂತೆ ಅಭಿವೃದ್ಧಿ ಕಾರ್ಯ ಮಾಡಲಾಗಿದೆ ಎಂದು ಹೇಳಿದರು.

ಪತ್ರಕರ್ತಕೊರ್ಲಕುಂಟೆತಿಪ್ಪೇಸ್ವಾಮಿಮಾತನಾಡಿದರು. ಅರ್ಚಕರಾದ ಕೆ.ವಿ. ಸುದರ್ಶನ್, ಜಿಪಂ ಕೆಡಿಪಿ ಸದಸ್ಯ ತಬಲ ರಂಗಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ. ಶಶಿಧರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ, ಬಿ. ಗುಜ್ಜಾರಪ್ಪ, ಮೆಡಿಕಲ್ ಕೇಶವ, ಗ್ರಾಪಂ ಸದಸ್ಯರಾದ ಎಸ್. ಶಿವಣ್ಣ, ವರಲಕ್ಷ್ಮಮ್ಮ, ಎಸ್. ಗೋವಿಂದರೆಡ್ಡಿ, ಲಕ್ಷ್ಮಿದೇವಿ ಸೇರಿದಂತೆ ದೇವಸ್ಥಾನ ಸಮಿತಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ರೈಲ್ವೆ ಇಲಾಖೆ ಹಸಿರು ನಿಶಾನೆ: ಸಂಸದ ಗೋವಿಂದ ಕಾರಜೋಳ

# ಚಿತ್ರದುರ್ಗ ಲೋಕಸಭಾ ಕ್ಷೇತ್ರದ ರೈಲ್ವೆ ಸೇತುವೆ ನಿರ್ಮಾಣಕ್ಕೆ ರೂ.164.00 ಕೋಟಿ ಬಿಡುಗಡೆ

» **ಚಿತ್ರದುರ್ಗ**



ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನೆನೆಗುದಿಗೆ ಬಿದ್ದಿದ್ದ ಪ್ರಮುಖ ಮೂರು ರೈಲ್ವೆ ಮೇಲು ಸೇತುವೆಗಳ ನಿರ್ಮಾಣಕ್ಕೆ ರೈಲ್ವೆ ಇಲಾಖೆ ಹಸಿರು ನಿಶಾನೆ ತೋರಿಸಿದೆ. ಈ ಮೂರು ಮೇಲು ಸೇತುವೆಗಳನ್ನು ನಿರ್ಮಾಣ ಮಾಡಲು ತಗುಲುವ ವೆಚ್ಚ ರೂ.164.00 ಕೋಟಿಯನ್ನು ಶೇ.100 ರಷ್ಟು ಪೂರ್ಣ ಪ್ರಮಾಣದಲ್ಲಿ ರೈಲ್ವೆ ಇಲಾಖೆಯೇ ಭರಿಸಲಿದೆ ಎಂದು ಚಿತ್ರದುರ್ಗ ಸಂಸದರಾದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಶನಿವಾರಸುದ್ದಿಗೋಷ್ಟಿಯಲ್ಲಿಮಾತನಾಡಿದ ಅವರು, ಚಿತ್ರದುರ್ಗ ನಗರದ ರೈಲ್ವೆಸ್ಟೇಷನ್ ಪಕ್ಕದಲ್ಲಿ ಚಿತ್ರದುರ್ಗದಿಂದ ದಾವಣಗೆರೆಗೆ ಹೋಗುವ ರಸ್ತೆಯಲ್ಲಿ ಬರುವ ರೈಲ್ವೆ ಗೇಟ್ 22 ಕ್ಕೆ ಮೇಲುಸೇತುವೆ ನಿರ್ಮಾಣಕ್ಕೆ .78.66, ಚಿಕ್ಕಜಾಜೂರು ಬಳಿ ರೈಲ್ವೆ ಗೇಟ್ 1 ಕ್ಕೆ ಮೇಲುಸೇತುವೆ ನಿರ್ಮಾಣ ಮಾಡಲು 0.51.72 ಹಾಗೂ ಚಿಕ್ಕಜಾಜೂರು-ಚಿತ್ರದುರ್ಗ ಮಧ್ಯೆ ಬರುವ ಹಳಿಯೂರು ಹತ್ತಿರುವ ರೈಲ್ವೆ ಗೇಟ್-15 ಕ್ಕೆ ಮೇಲುಸೇತುವೆ ನಿರ್ಮಾಣ ಮಾಡಲು ರೂ.33.65 ಕೋಟಿ. ಈ ರೀತಿ ನೆನೆಗುದಿಗೆ ಬಿದ್ದಿದ್ದ ಈ ಮೂರು ಮೇಲು ಸೇತುವೆಗಳ ನಿರ್ಮಾಣಕ್ಕೆ ರೂ.164.00 ಕೋಟಿ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ನೀಡಲು ರೈಲ್ವೆ ಇಲಾಖೆ ಸಮ್ಮತಿಸಿದೆ. ಚಿತ್ರದುರ್ಗ ನಗರ ಪರಿಮಿತಿಯಲ್ಲಿ ಚಿತ್ರದುರ್ಗದಿಂದ-ದಾವಣಗೆರೆಗೆ ಹೋಗುವ ರಸ್ತೆಯಲ್ಲಿ ರೈಲ್ವೆ ಸ್ಟೇಷನ್ ಪಕ್ಕದಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್-22ಕ್ಕೆ ಮೇಲುಸೇತುವೆ ನಿರ್ಮಾಣ ಮಾಡಲು ಈ ಮೊದಲು ರೈಲ್ವೆ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರ ಶೇಕಡ 50:50 ರ ಅನುಪಾತದಲ್ಲಿ ರೂ.35.11 ಕೋಟಿ ಅನುದಾನ ಮೀಸಲಿಡಲಾಗಿತ್ತು. ಇದರಲ್ಲಿ ರಾಜ್ಯ ಸರ್ಕಾರವೂ ಕೂಡ ಅರ್ಧ ಪಾಲು ಕೊಡಬೇಕಾಗಿತ್ತು. ಈ ಅನುದಾನದಲ್ಲಿ ಮೇಲುಸೇತುವೆಯಲ್ಲಿ 2 ಲೇನ್ ರಸ್ತೆ ನಿರ್ಮಾಣ ಆ ಕಡೆ 2.5 ಅಡಿ ಪಾದಚಾರಿ ರಸ್ತೆ, ಮತ್ತು ಸೇತುವೆ ಕೆಳಗೆ ಎರಡೂ ಕಡೆ ಅಗಲದ ಸರ್ವೀಸ್ ರಸ್ತೆ ನಿರ್ಮಾಣ ಮಾಡುವ ಉದ್ದೇಶವಿತ್ತು, ಆದ ಮೇಲುಸೇತುವೆ ನಿರ್ಮಾಣ ಮಾಡಲು ಬೇಡಿಕೆ ಬಂದ ಹಿನ್ನಲೆಯಲ್ಲಿ ಅದಕ್ಕೆ ಎಕರೆಯಷ್ಟು ಭೂಮಿ ಮತ್ತು ಭೂ-ಸ್ವಾಧೀನ ವೆಚ್ಚವನ್ನು ರಾಜ್ಯ ಸರ್ಕಾರ ನಿಮಯ ಆದರೆ, ಭೂ ಸ್ವಾಧೀನದ ಹಣವನ್ನು ನೀಡಲು ರಾಜ್ಯ ಸರ್ಕಾರ ಯಾ ನಿರ್ಧಾರಕ್ಕೆ ಬರಲು ವಿಳಂಭ ನೀತಿ ಅನುಸರಿಸಿದ ಕಾರಣ ಹಲವು ವರ್ಷ ಯೋಜನೆ ನೆನೆಗುದಿಗೆ ಬಿದ್ದಿತ್ತು. ಚಿತ್ರದುರ್ಗದಿಂದ ದಾವಣಗೆರೆಗೆ ಹೋಗುವ ರಸ್ತೆಯಲ್ಲಿ ಬರುವ ಈ ರೈಲ್ವೆ ಗೇಟ್ ಬರುವ ಸಮಯದಲ್ಲಿ ಒಂದು ದಿನದಲ್ಲಿ ಕನಿಷ್ಠ 30 ಬಾರಿ ಮುಚ್ಚಲ್ಪಡುತ್ತದೆ. ಪ್ರ ಬಾರಿ ಸುಮಾರು 8 ರಿಂದ 10 ನಿಮಿಷಗಳ ಕಾಲ ಎರಡೂ ಕಡೆಯಿಂದ ವಾಹನಗಳು ನಿಲುಗಡೆಯಾಗಿ ವಾಹನ ಸವಾರರಿಗೆ ಹಾಗೂ ಪ್ರಯಾಣಿಕರಿಗೆ ಅನಾನುಕೂಲದ ಜೊತೆಗೆ ಕಿರಿಕಿರಿಯುಂಟಾಗುತ್ತಿತ್ತು. ಇದನ್ನು ಮನಗಂಡ ಸರ್ಕಾರ ತನ್ನ ಪಾಲಿನ ಹಣವನ್ನು ನೀಡಲು ನಿರಾಕರಿಸಿದ ಮೇಲೆ ರೈಲ್ವೆ ಸಚಿವ ಒತ್ತಡ ಹೇರಿ ಇಲ್ಲಿನ ವಾಸ್ತವ ಸ್ಥಿತಿಯನ್ನು ಹಾಗೂ ವಾಹನ ಸವಾರರ ಪರದ ಸಚಿವರಿಗೆ ಮನದಟ್ಟು ಮಾಡಿಕೊಡಲಾಗಿತ್ತು. ಇದಕ್ಕೆ ಸಕಾರಾತ್ಮವಾಗಿ ಸ್ಪಂದಿಸಿ ಸಚಿವರು ಮೇಲುಸೇತುವೆಗಳ ನಿರ್ಮಾಣಕ್ಕೆ ತಗಲುವ ಸಂಪೂರ್ಣ ವೆಚ್ಚವನ ಇಲಾಖೆಯಿಂದಲೇ ಭರಿಸಲು ಸಮ್ಮತಿಸಿದ್ದಾರೆ. ಚಿತ್ರದುರ್ಗ ನಗರ ಪರಿಮಿತಿಯಲ್ಲಿ ಮೇಲುಸೇತುವೆ ನಿರ್ಮಾಣಕ್ಕೆ ಬಿಡುಗಡೆಯ ರೂ.78.66 ಕೋಟಿ ಅನುದಾನದಲ್ಲಿ 4 ಪಥದ ಮೇಲುಸೇತುವೆ ನಿರ್ಮಾಣ, ಮೇಲೆ ಎರಡೂ ಕಡೆ 3 ಅಡಿ ಪಾದಚಾರಿ ರಸ್ತೆ, ಮತ್ತು ಸೇತುವೆ ಕೆಳಗೆ ಎರ 5.5 ಮೀಟರ್ ಅಗಲದ ಸರ್ವೀಸ್ ರಸ್ತೆ ನಿರ್ಮಾಣ ಮಾಡಲಾಗುತ್ತ ಗ್ರೇಡಿಯಂಟ್ನಲ್ಲಿ ಸೇತುವೆ ನಿರ್ಮಾಣವಾಗಲಿದ್ದು, ಈಗ 30 ಮೀಟರ್ ಅಗ ಮಾತ್ರ ಲಭ್ಯವಿದ್ದು, ಸೇತುವೆ ನಿರ್ಮಾಣಕ್ಕೆ ಹೆಚ್ಚಿನ ಭೂಮಿ ಬೇಕಾದಲ್ಲಿ ರಾಜ್ಯ ಭೂ-ಸ್ವಾಧೀನ ಮಾಡಿಕೊಡಬೇಕಾಗಿದೆ, ಭೂ-ಸ್ವಾಧೀನಕ್ಕೆ ತಗುಲುವ ವೆಚ್ಚವನ್ನು ಇಲಾಖೆಯೇ ಭರಿಸಲಿದೆ ಎಂದು ತಿಳಿಸಿದರು.

ಈಗಾಗಲೇ, ಉಪ ಮುಖ್ಯ ಅಭಿಯಂತರರು, ರಸ್ತೆ ಮೇಲು ಸೇತುವೆಗಳು, ನೈರುತ್ಯ ಹುಬ್ಬಳ್ಳಿ, ಇವರು ಚಿತ್ರದುರ್ಗ ಜಿಲ್ಲಾಧಿಕಾರಿಗಳಿಗೆ ಈ ಮೂರು ರೈಲ್ವೆ ಗೇಟುಗಳನ್ನು-ಶಾಶ್ವತವಾಗಿ ಮುಚ್ಚಿ, ಸೇತುವೆ ಕಾಮಗಾರಿಗಳು ಪೂರ್ಣಗೊಳ್ಳುವವರೆಗೆ ಸಂಚಾರಕ್ಕೆ ಬದಲಿ ಮಾರ್ಗವ್ಯವಸ್ಥೆಮಾಡಿಕೊಡುವಂತೆಹಾಗೂ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಶಿವಮೊಗ್ಗ ವೃತ್ತ, ಇವರಿಗೆ ಜನ ಅಲೈನ್ಮೆಂಟ್ ಡ್ರಾಯಿಂಗ್ಗೆ ಅನುಮೋದನೆ ನೀಡುವಂತೆ ಕೋರಿ ಪತ್ರ ಬರೆದಿರುತ ಶೀಘ್ರದಲ್ಲಿ ಈ ಮೂರು ಮೇಲು ಸೇತುವೆ ಕಾಮಗಾರಿಗಳ ಕೆಲಸ ಪ್ರಾರಂಭವಾಗಲಿದೆ. ಕೇಂದ್ರ ರಸ್ತೆ ನಿಧಿ ಯೋಜನೆಯಡಿ ರಸ್ತೆಗಳ ಅಭಿವೃದ್ಧಿಗೆ : ರೂ.48.00 ಕೋಟಾ ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 8 ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ರಸ್ತೆಗಳ ಅಭಿವೃದ್ಧಿಗೆ ತಲಾ ರೂ.6.00 ಕೋಟಿಯಂತೆ ಒಟ್ಟು ರೂ.48.00 ಕೋಟಿ ಅನುದಾನ ಬಿಡಗಡೆಯಾಗಿದೆ.

ಚಿತ್ರದುರ್ಗ ತಾಲ್ಲೂಕು ಕುಮಟಾ-ಕಡಮಡಗಿ ಹೆದ್ದಾರಿ ಅಭಿವೃದಿಗೆ 6.00 ಕೋಟಿ,ಚಳ್ಳಕೆರೆ ಕ್ಷೇತ್ರದಲ್ಲಿ ಕುಮಟಾ-ಕಡಮಡಗಿ ಹೆದ್ದಾರಿ ಅಭಿವೃದ್ಧಿಗೆ -6.00 ಕೋಟಿ,ಹಿರಿಯೂರು ತಾಲ್ಲೂಕು ರಾಜ್ಯ ಹೆದ್ದಾರಿ-24 ತರೀಕೆರೆ-ಹೊಸದುರ್ಗ-ಹಿರಿಯೂರು-ಧರ್ಮಪುರ ರಸ್ತೆ ಅಭಿವೃದ್ಧಿಗೆ ರೂ.6.00 ಕೋಟಿ.,ಹೊಳಲ್ಕೆರೆ ತಾಲ್ಲೂಕು ಮಂಡ್ಯ-ಹಡಗಲಿ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ-ರೂ.6.00 ಕೋಟಿ. ,ಹೊಸದುರ್ಗ ತಾಲ್ಲೂಕು ಹೊಸದುರ್ಗ-ವಿವಿಪುರ-ಹಿರಿಯೂರು-ಧರ್ಮಪುರ ಹೆದ್ದಾ ಅಭಿವೃದ್ಧಿಗೆ ರೂ.6.00 ಕೋಟಿ. ,ಹಂಪಿ-ಕಮಲಾಪುರ ರಾಜ್ಯ ಹೆದ್ದಾರಿ ಅಭಿವೃದ್ಧಿ, ಮೊಳಕಲೂರು ತಾಲೂಕು, 6.00 ಕೋಟಿ. ,ಶಿರಾ ತಾಲ್ಲೂಕು ಸಿರಾದಿಂದ ಆಂಧ್ರ ಗಡಿಭಾಗದ ರಸ್ತೆ ಪಟ್ಟನಾಯಕನಹಳ್ಳಿ ಗೇಟ್ ಮಾರ್ಗವಾಗಿ ರಸ್ತೆ ಅಭಿವೃದ್ಧಿ-ರೂ.6.00 ಕೋಟಿ. ,ಪಾವಗಡ ತಾಲ್ಲೂಕಿನಲ್ಲಿ ರಾಜ್ಯ ಹೆದ್ದಾರಿ-48 ಕುಮಟಾ-ಕಡಮಡಗಿ ಹೆದ್ದಾರಿಯ ಆಯ್ದ ಭಾಗಗಳಲ್ಲಿ ಹೆದ್ದಾರಿ ಅಭಿವೃದ್ಧಿ-ರೂ.6.00 ಕೋಟಿ. 4 ಶಿರಾ-ಬಡವನಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿ- 69 (ಶಿರಾ ನಗರ ಪರಿಮಿತಿ) ಅಭಿವೃದ್ಧಿಗಾಗಿ ರೂ. 562.00 ಕೋಟಿ ಮೊತ್ತಕ್ಕೆ ಹಣಕಾಸು ಸ್ಥಾಯಿ ಸಮಿತಿ ಹಸಿರು ನಿಶಾನೆ ರಾಷ್ಟ್ರೀಯ ಹೆದ್ದಾರಿ- 69 (ಹೊನ್ನಾವರ-ಬಾಣಾವರ) ಹೆದ್ದಾರಿಯು ಶಿರಾ ಬಳಿ ರಾಷ್ಟ್ರೀಯ ಹೆದ್ದಾರಿ-48ನ್ನು (ಪೂನಾ-ಬೆಂಗಳೂರು) ಕಿ.ಮೀ. 116.800 ರಲ್ಲಿ ಛೇಧಿಸಿದ್ದು, ಹೊನ್ನಾವರ-ಬಾಣಾವರ ರಾಷ್ಟ್ರೀಯ ಹೆದ್ದಾರಿಯನ್ನು ಕಿ.ಮೀ. 347 ರಿಂದ 367 ರವರೆಗೆ ಶಿರಾ ಪಟ್ಟಣದ ಪರಿಮಿತಿಯಲ್ಲಿ ಸುಮಾರು 20 ಕಿ.ಮೀ. ಉದ್ದದ ನಾಲ್ಕು ಪಡಿಸಲು ರೂ. 562.53 ಕೋಟಿ ಅನುದಾನ ಕೋರಿ ಸಮಗ್ರ ಯೋಜನಾ ವರದಿಯನ್ನು ಹೆದ್ದಾರಿ ವಿಭಾಗದವರು ಹೆದ್ದಾರಿ ಸಚಿವಾಲಯಕ್ಕೆ ಸಲ್ಲಿಸಿದ್ದರು.

ಇತ್ತೀಚಿಗೆ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿಯವರನ್ನು ಭೇಟಿಯಾಗಿ ಚಿತ್ರದುರ್ಗ ಲೋಕಸಭಾಕ್ಷೇತ್ರವ್ಯಾಪ್ತಿಯಪ್ರಸ್ಥಾವನೆಗಳಿಗೆ ಅನುಮೋದನೆ ನೀಡುವಂತೆ ಮನವಿ ಮಾಡಿಕೊಳ್ಳಲಾಗಿತ್ತು. ಇದರ ಫಲವಾಗಿ ಹಣಕಾಸು ಸ್ಥಾಯಿ ಸಮಿತಿ ಸಭೆಯಲ್ಲಿ ಈ ಪಸ್ತಾವನೆಗೆ ಕ್ಲಿಯರೆನ್ಸ್ ನೀಡಲಾಗಿದೆ. ಚಿತ್ರದುರ್ಗ ಲೊಕಸಭಾಕ್ಷೇತ್ರ ವ್ಯಾಪ್ತಿಯ ಅಭಿವೃದ್ಧಿ ಕೆಲಸಕ್ಕೆ ರೂ. 562.53 ಕೋಟಿ ಮೊತ್ತಕ್ಕೆ ಕ್ಲಿಯರೆನ್ಸ್ ನೀಡಿದ ಮುಂದಿನ ಒಂದು ವಾರದೊಳಗೆ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿಯವರು ರೂ. 562.53 ಕೋಟಿ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಿದ್ದಾರೆ ಎಂದು ಸಂಸದರು ತಿಳಿಸಿದರು.

ಗೋಷ್ಟಿಯಲ್ಲಿನ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಖಂಜಾಚಿ ಮಾಧುರಿ ಗೀರೀಶ್, ವಕ್ತರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್, ಛಲವಾದಿ ತಿಪ್ಪೇಸ್ವಾಮಿ, ನಗರಾಧ್ಯಕ್ಷ ಲೋಕೇಶ್ ಹಾಜರಿದ್ದರು.

## ಸೇವಾಲಾಲ್ ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬಿತ್ತಿದ ಮಹಾನೀಯರು: ತಹಶೀಲ್ದಾರ್ ರೇಹಾನ್‌ಪಾಷ

» **ಚಳ್ಳಕೆರೆ**



ಹಲವಾರು ಸಮಾಜದ ಸುಧಾರಕರ ಜಯಂತಿ ಆಚರಣೆ ಮೂಲಕ ಸಮಾಜದಲ್ಲಿ ಸಮಾನತೆ ಸಾರುವ ದೃಷ್ಠಿಯಿಂದ ರಾಜ್ಯ ಸರ್ಕಾರ ಮಹಾನೀಯರ ಆದರ್ಶಗಳನ್ನು ಸಮಾಜಕ್ಕೆ ತಿಳಿಸುವ ಕೆಲಸ ಮಾಡುತ್ತಿದೆ ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ಧಾರ್ ರೇಹಾನ್‌ಪಾಷ ತಿಳಿಸಿದರು.

ಅವರು, ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ಬಂಜಾರ ಸಮುದಾಯ ಹಮ್ಮಿಕೊಂಡಿದ್ದ ಸಂತಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಸೇವಾಲಾಲ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ನಮ್ಮ ದೇಶದ ನೆಲ, ಸಾಂಸ್ಕೃತಿಕವೈವಿಧ್ಯತೆ, ಧರ್ಮಸುಧಾರಣೆ ಜನರಲ್ಲಿದ್ದ ಮೌಢ್ಯತೆಯನ್ನು ದೂರಮಾಡುವಲ್ಲಿ ಸಂತಸೇವಾಲಾಲ್ ಮಹಾರಾಜು ಸಾಕಷ್ಟು ಶ್ರಮಿಸಿದ್ದಾರೆ.ಅವರಆದರ್ಶಗಳನ್ನುಯುವಪೀಳಿಗೆ ಮೈಗೂಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಉಪನ್ಯಾಸ ನೀಡಿದ ಸಮಾಜದ ಮುಖಂಡ ಪುರುಷೋತ್ತಮನಾಯ್ಕ, ನೊಂದವರ ಕಣ್ಣೀರು ಒರೆಸುವಲ್ಲಿ ಸೇವಾಲಾಲ್‌ಮಹಾರಾಜರ ಪಾತ್ರ ಹೆಚ್ಚಿದೆ. ಸಮಾಜದಲ್ಲಿ ತುಳಿತಕ್ಕೆ ಒಳಗಾದ ಜನರಿಗೆ ಆತ್ಮಸ್ಥೈರ್ಯ ತುಂಬುತ್ತಿದ್ದ ಮಹಾರಾಜರು ಕೇವಲ ಬಂಜಾರ ಸಮುದಾಯಕ್ಕೆ ಸೀಮಿತವಾಗದೆ ಎಲ್ಲಾ ವರ್ಗದ ಜನರ ಕಣ್ಣೀರು ಒರೆಸಿದ್ದರು. ಎಲ್ಲರಿಗೂ ಸೇವೆ ಸಲ್ಲಿಸುವ ಮೂಲಕ ಮಾನವೀಯತೆಯ ನೈಜಸೇವಕರಾಗಿ ಹೊರಹೊಮ್ಮಿದ್ದರು. ಅವರ ತತ್ವಾದರ್ಶಗಳು ಸದಾ ನಮ್ಮೆಲ್ಲರಿಗೂ ಮಾರ್ಗದರ್ಶಿನವಾಗಿವೆ ಎಂದರು. ಸಮಾಜದ ಮುಖಂಡರಾದ ಎಸ್.ಗೋವಿಂದನಾಯ್ಕ, ಡಾ.ಚಂದ್ರನಾಯ್ಕ, ಗೋಪಾಲನಾಯ್ಕ, ಗೀತಾಬಾಯಿ,ಯಶವಂತನಾಯ್ಕ,ಶಂಕರನಾಯ್ಕ, ಪಶುಇಲಾಖೆ ಡಾ.ರೇವಣ್ಣ, ಸಮಾಜಕಲ್ಯಾಣ ಇಲಾಖೆ ಅಧಿಕಾರಿ ದೇವ್ಲಾನಾಯ್ಕ, ಡಿ.ಶ್ರೀನಿವಾಸ್, ಗೋವಿಂದನಾಯ್ಕ ಮೊದಲಾದವರು ಇದ್ದರು.

## ಫೆ.28ರಿಂದ ಬೆಂಗಳೂರಿನಲ್ಲಿ ನಿವೃತ್ತಿ ನೌಕರರ ಅನಿಧಿರ್ಷ್ಟಾವಧಿ ಮುಷ್ಕರ




» **ಚಳ್ಳಕೆರೆ**

7ನೇ ವೇತನ ಆಯೋಗದ ಶಿಫಾರಸ್ಸಿನಂತೆ ನಿವೃತ್ತ ನೌಕರರಿಗೆ ವೇತನ ನೀಡಲು ರಾಜ್ಯ ಸರ್ಕಾರ ಹಿಂದೇಟು ಹಾಕುತ್ತಿರುವುದನ್ನು ವಿರೋಧಿಸಿ ಫೆ.28ರಂದು ಬೆಂಗಳೂರಿಗೆ ಫ್ರೀಡಂಪಾರ್ಕ್‌ನಲ್ಲಿ ಅನಿಧಿರ್ಷ್ಟಾವಧಿ ಮುಷ್ಕರ ನಡೆಸಿ ವೇತನ ಜಾರಿಗೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಕರ್ನಾಟಕ ನಿವೃತ್ತನೌಕರರ ವೇದಿಕೆ ಜಿಲ್ಲಾಸಂಚಾಲಕ ಡಿ.ದಯಾನಂದ ತಿಳಿಸಿದರು.ಅವರು, ನಗರದ ಸರ್ಕಾರಿ ನೌಕರರ ಭವನದಲ್ಲಿ ಶನಿವಾರ ಏರ್ಪಡಿಸಿದ್ದ ಪೂರ್ವಸಿದ್ದತಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಕಳೆದ ಹಲವಾರು 24ತಿಂಗಳಿನಿಂದ ನಿವೃತ್ತ ನೌಕರರ ವೇದಿಕೆ ಸರ್ಕಾರಕ್ಕೆ ನಿರಂತರ ಮನವಿ ಮಾಡುತ್ತಿದ್ದರೂ ಯಾವುದೇ ಕ್ರಮವನ್ನು ಸರ್ಕಾರ ಅನುಸರಿಸುತ್ತಿಲ್ಲ. 2022-24ರ ಅವಧಿಯಲ್ಲಿ ರಾಜ್ಯದಲ್ಲಿ 27 ಸಾವಿರ ನೌಕರರ ನಿವೃತ್ತರಾಗಿದ್ದು, ಅವರಿಗೆ ಇದುವರೆಗೂ ಸೂಕ್ತ ರೀತಿಯಲ್ಲಿ ಸರ್ಕಾರ ಸ್ಪಂದಿಸುತ್ತಿಲ್ಲ. ಬರುವ ರಾಜ್ಯದ ಬಜೆಟ್ ಅಧಿವೇಶನದಲ್ಲಿ ನಿವೃತ್ತನೌಕರರ ವೇದಿಕೆಯ ಬೇಡಿಕೆಯನ್ನು ಈಡೇರಿಸುವತ್ತ ಮುಂದಾಗಬೇಕು ಎಂದರು.

**ಪ್ರಮುಖ ಸುದ್ದಿ**

# ಸಿ.ಸಿ.ರಸ್ತೆ, ಇಂಗುಕೆರೆ ಅಭಿವೃದ್ಧಿ ಕಾಮಗಾರಿಗೆ ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**



ಸರ್ಕಾರದಿಂದ ಕೋಟಿ ಕೋಟಿ ಹಣ ತಂದು 493 ಹಳ್ಳಿಗಳಲ್ಲಿಯೂ ನಿರ್ವಂಚನೆಯಿಂದ ಕೆಲಸ ಮಾಡುವುದಾಗಿ ಶಾಸಕ ಡಾ.ಎಂ. ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ತಣಿಗೆಹಳ್ಳಿ ಗ್ರಾಮದಲ್ಲಿ 3 ಕೋಟಿ ರೂ.ವೆಚ್ಚದಲ್ಲಿ ನೂತನ ಸಿ.ಸಿ. ರಸ್ತೆ ಕಾಮಗಾರಿ, 1.50 ಕೋಟಿ ರೂ.ವೆಚ್ಚದಲ್ಲಿ ನೂತನ ಚೆಕ್‌ಡ್ಯಾಮ್ ನಿರ್ಮಾಣ ಮತ್ತು

ಇಂಗುಕೆರೆ ಅಭಿವೃದ್ಧಿ ಕಾಮಗಾರಿಗೆ ಶನಿವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಒಳ್ಳೆಯ ಕೆಲಸ ಮಾಡಬೇಕೆಂಬ ಬದ್ದತೆಯುಳ್ಳ ರಾಜಕಾರಣಿ ನಾನು. ನ್ಯಾಯ, ನೀತಿ, ಧರ್ಮ ಕಾಪಾಡುವ ಪ್ರಜ್ಞೆಯಿಟ್ಟುಕೊಂಡಿದ್ದೇನೆ. ಸರ್ಕಾರ ಯಾವುದೇ ಅಧಿಕಾರದಲ್ಲಿರಲಿ ಅನುದಾನ ತಂದು ಕ್ಷೇತ್ರ ಅಭಿವೃದ್ಧಿಪಡಿಸುವ ಯೋಗ್ಯತೆಯಿದೆ. 31 ವರ್ಷಗಳ ಹಿಂದೆ ಪ್ರಥಮ ಬಾರಿಗೆ ಭರಮಸಾಗರದಲ್ಲಿ ಸ್ಪರ್ಧಿಸಿದಾಗ ಓಡಾಡಲು ರಸ್ತೆಯಿರಲಿಲ್ಲ. ಗೆದ್ದ ಮೇಲೆ ಐದು ವರ್ಷಗಳಲ್ಲಿ ಎಲ್ಲಾ ಹಳ್ಳಿಗಳಲ್ಲಿ ಗುಣಮಟ್ಟದ ರಸ್ತೆ ಮಾಡಿಸಿದ್ದರಿಂದ ಜನ ರಸ್ತೆ ರಾಜ ಎಂಬ ಬಿರುದು ನೀಡಿ ಎರಡನೆ ಬಾರಿಗೂ ನನ್ನನ್ನು ಗೆಲ್ಲಿಸಿದರೆಂದು ಸ್ಮರಿಸಿಕೊಂಡರು.

ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ಅರ್ಥಮಾಡಿಕೊಂಡು ಕೆಲಸ ಮಾಡುತ್ತೇನೆ. ಮಕ್ಕಳು ಓದಲು ಗಾಳಿ, ಬೆಳಕು ವಾತಾವರಣ ಚೆನ್ನಾಗಿರಬೇಕೆಂದು ಗುಡ್ಡದ ಮೇಲೆ ಸ್ಕೂಲ್ ಕಟ್ಟಿಸಿದ್ದೇನೆ. ಹೈಟೆಕ್ ಆಸ್ಪತ್ರೆ, ಶಾಲಾ-ಕಾಲೇಜು, ಗುಣಮಟ್ಟದ ರಸ್ತೆ, ಸ್ಟೇಡಿಯಂ, ಈಜುಕೊಳ, ಬಿಲ್ಡಿಂಗ್‌ಗಳನ್ನು ಕಟ್ಟಿಸಿದ್ದೇನೆ. ಚುನಾವಣೆಯಲ್ಲಿ ಯಾರಿಗೆ ಮತ ಕೊಟ್ಟರೆ ಬೆಲೆ ಬರುತ್ತದೆಂದು ಅರ್ಥಮಾಡಿಕೊಳ್ಳಿ ಎಂದು ತಣಿಗೆಹಳ್ಳಿ ಜನತೆಗೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲ್ಲೂಕು ಬಿಜೆಪಿ.ಮಂಡಲ ಮಾಜಿ ಅಧ್ಯಕ್ಷ ಸಿದ್ದೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ತಿಪ್ಪೇಶ್, ಬಿ.ದುರ್ಗ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಲೋಕೇಶಪ್ಪ, ಮಾಜಿಅಧ್ಯಕ್ಷರಾಮಪ್ಪ,ಗ್ರಾಮಪಂಚಾಯಿತಿ ಸದಸ್ಯರುಗಳಾದ ಗೋವಿಂದನಾಯ್ಕ, ಮಂಜಿಬಾಯಿ ಸುರೇಶ್, ಸುಧಾ ಚಂದ್ರಶೇಖರ್, ಕರಿಯಪ್ಪ, ಆರ್.ಡಬ್ಲ್ಯು. ಎಸ್.ಎಸ್. ಸಹಾಯಕ ಕಾರ್ಯಪಾಲಕ ಅಭಿಯಂತರ ದಿಗಂಬರ್ ಕಾಂಬ್ಳೆ, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್‌ಗಳಾದ ನಾಗರಾಜ್ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T